MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 331 | ಶುಕ್ರವಾರ : 24-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 331 | FRIDAY : 24-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸುಪ್ರೀಂಕೋರ್ಟಿನ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆತ ಪ್ರಕರಣ ಖಂಡಿಸಿ ಪ್ರತಿಭಟನೆ.




**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.23–** ಸುಪ್ರೀಂಕೋರ್ಟಿನ ಮುಖ್ಯ ನ್ಯಾಯಾಧೀಶ ಬಿ.ಆರ್.ಗವಾಯಿ ಮೇಲೆ ಹಿರಿಯ ವಕೀಲ ರಾಕೇಶ್ ಕಿಶೋರ ಶೂ ಎಸೆದಿರುವ ಪ್ರಕರಣ ಖಂಡಿಸಿ ಸಂವಿಧಾನ ಸಂರಕ್ಷಕರ ವೇದಿಕೆ ವತಿಯಿಂದ ಮಾನ್ವಿ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಪಟ್ಟಣದ ಬಸವ ವೃತ್ತದಲ್ಲಿ ಕೆಲಕಾಲ ಧರಣಿ ನಡೆಸಿ ನಂತರ ತಹಸೀಲ್ದಾರ್ ಮೂಲಕ ಸರಕಾರಕ್ಕೆ ಸಲ್ಲಿಸಿದ ಮನವಿಯಲ್ಲಿ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಮೇಲೆ ದಾಳಿ ನಡೆಸಿದ ರಾಕೇಶ ಕಿಶೋರ್‌ಗೆ ಕಠಿಣ ಶಿಕ್ಷೆ ವಿಧಿಸುವಂತೆ ಸಂವಿಧಾನ ಸಂರಕ್ಷಣ ಸಮಿತಿ ಒತ್ತಾಯಿಸಿದರು.

ಕುಟುಂಬಕ್ಕೆ ಸೂಕ್ತ ರಕ್ಷಣೆ ಒದಗಿಸಬೇಕು. ಕೋಮುದ್ವೇಷದ ಹೇಳಿಕೆ ನೀಡಿ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕದಡುವ ಸಂಘಪರಿವಾರ ಮತ್ತು ಮತೀಯವಾದಿಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮ ಜರುಗಿಸಬೇಕು. ಸಂವಿಧಾನ, ಪ್ರಜಾಪ್ರಭುತ್ವ ಹಾಗೂ ನ್ಯಾಯಾಂಗದ ಮೇಲಿನ ದಾಳಿಯೆಂದು ಪರಿಗಣಿಸಿ, ಸೂಕ್ತ ಕ್ರಮ ಜರುಗಿಸಬೇಕು. ಸಂವಿಧಾನ ಹಾಗೂ ಪ್ರಜಾಪ್ರಭುತ್ವದ ಉಳಿವಿಗಾಗಿ ಪಕ್ಷ ಹಾಗೂ ಧರ್ಮ ಬಿಟ್ಟು ಹೋರಾಡಬೇಕು. ದೇಶಕ್ಕೆ ಅತಿದೊಡ್ಡ ಕವಚ ಸಂವಿಧಾನ. ಅದಕ್ಕೆ ವಿರುದ್ಧವಾಗಿ ನ್ಯಾಯಮೂರ್ತಿ ಮೇಲೆ ಶೂ ಎಸೆದಿರುವ ವ್ಯಕ್ತಿಯನ್ನು ಬಂಧಿಸಿ ಗಲ್ಲು ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿದರು. ರಾಜತಾಂತ್ರಿಕ ವ್ಯವಸ್ಥೆಯಲ್ಲಿ ರಾಜರೇ ಪ್ರಭುಗಳಾಗಿದ್ದರು. ಆದರೆ ಪ್ರಜಾಪ್ರಭುತ್ವ ವ್ಯವಸ್ಥೆಯಡಿ ಪ್ರಜೆಗಳೆ ಪ್ರಭುಗಳು. ಅದಕ್ಕಾಗಿ ಬಿ.ಆರ್.ಅಂಬೇಡ್ಕರ್ ಸಂವಿಧಾನ ರಚಿಸಿ ನ್ಯಾಯಾಂಗ ವ್ಯವಸ್ಥೆ ನಿರ್ಮಿಸಿದರು. ಆದರೆ, ಮನುವಾದಿ ವ್ಯಕ್ತಿತ್ವವುಳ್ಳ ವಕೀಲ ಮುಖ್ಯ ನ್ಯಾಯಮೂರ್ತಿಗೆ ಅಪಮಾನಿಸಿ ಸಂವಿಧಾನಕ್ಕೆ ಅಗೌರವ ತೋರಿದ್ದಾರೆ ಎಂದು ದೂರಿದರು. ಬಾಬಾ ಸಾಹೇಬ ಅಂಬೇಡ್ಕರ್ ಸಿದ್ಧಾಂತದ ಮೇಲೆ ನಡೆದ ದಾಳಿಯಾಗಿದೆ. ದಾಳಿಕೋರ ಕೋರ್ಟ್ ಆವರಣದಿಂದ ಹೊರ ನಡೆಯುವ ವೇಳೆ ಸನಾತನ ಧರ್ಮದ ಅಪಮಾನ ಸಹಿಸುವುದಿಲ್ಲ" ಎಂದು ಕೂಗಿರುವುದು ವರದಿಯಾಗಿದೆ. **(2ನೇಪುಟಕ್ಕೆ)**

## ಬೂತ್ ಮಟ್ಟದ ಕಾರ್ಯಕರ್ತರೇ ನಿಜವಾದ ನಾಯಕರು: ಡಿ.ಕೆ.ಶಿವಕುಮಾರ್

**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.23–** ಜಿಲ್ಲೆಯ ಪಂಚಮುಖಿಯಲ್ಲಿ ಬುಧವಾರ ನಡೆದ ರಾಯಚೂರು ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್‌ಗೆ ನೂತನವಾಗಿ ನೇಮಕಗೊಂಡ ಪದಾಧಿಕಾರಿಗಳ ಸಭೆಯಲ್ಲಿ ಕರ್ನಾಟಕ ರಾಜ್ಯದ ಉಪಮುಖ್ಯಮಂತ್ರಿ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಭಾಗವಹಿಸಿ ಪಕ್ಷ ಸಂಘಟನೆ ಮತ್ತು ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚಿಸಿದರು.



ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಪಕ್ಷ ಸಂಘಟನೆಯ ವಿಚಾರದಲ್ಲಿ ಪ್ರತಿಯೊಬ್ಬ ಕಾರ್ಯಕರ್ತನು ಗಂಭೀರವಾಗಿ ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ಬೂತ್ ಮಟ್ಟದಲ್ಲಿ ಕೆಲಸ ನಿರ್ವಹಿಸಬೇಕು ಎಂದು ಕರೆ ನೀಡಿದರು. "ಯಾವ ಬೂತ್‌ನಲ್ಲಿ ಬಹುಮತ ಬರುತ್ತದೆ, ಆ ಬೂತ್ ಮಟ್ಟದ ಕಾರ್ಯಕರ್ತರೇ ನಿಜವಾದ ನಾಯಕರು," ಎಂದು ಅವರು ಘೋಷಿಸಿದರು.

"ಈ ವೇದಿಕೆ ಮೇಲೆ ಕುಳಿತವರೆಲ್ಲ ವ್ಯಕ್ತಿ ಪೂಜೆಗಿಂತ ಪಕ್ಷ ಪೂಜೆ ಮಾಡಬೇಕು. ಕಾಂಗ್ರೆಸ್ ಪಕ್ಷವಿದ್ದರೆ ನಾವು, ನೀವು ಮತ್ತು ನಮ್ಮ ಪಕ್ಷ ಇರುತ್ತದೆ. ಪಕ್ಷ ಅಧಿಕಾರಕ್ಕೆ ಬಂದರೆ ಜನಸೇವೆ ಮಾಡಿದವರನ್ನು ಅಧಿಕಾರದ ಚುಕ್ಕಾಣಿಗೆ ಜನ ಹಾಗೂ ಪಕ್ಷ ಗುರುತಿಸುತ್ತದೆ," ಎಂದು ಡಿ.ಕೆ. ಶಿವಕುಮಾರ್ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಅವರು ಸಚಿವ ಎನ್.ಎಸ್. ಬೋಸರಾಜು ಅವರ ಸುದೀರ್ಘ ರಾಜಕಾರಣದ ಪ್ರಯಾಣವನ್ನು ಉದಾಹರಿಸಿದರು. "ನಿಮ್ಮ ಜಿಲ್ಲೆಯ ಹಿರಿಯ ಸಚಿವರಾದ ಎನ್.ಎಸ್.ಬೋಸರಾಜು ಅವರ 45 ವರ್ಷಗಳ ಸುದೀರ್ಘ ರಾಜಕಾರಣದ ಫಲವಾಗಿ ಶಾಸಕರು ಹಾಗೂ ಪರಿಷತ್ತಿನ ಸದಸ್ಯರು ಅಲ್ಲದಿದ್ದರೂ ಸಹ ಪಕ್ಷ **(2ನೇಪುಟಕ್ಕೆ)**

## ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರನ್ನು ಗುರುತಿಸಿ ಮಣೆ: ಬೋಸರಾಜು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.23–** ಕಾಂಗ್ರೆಸ್ ಪಕ್ಷದ ಪರವಾಗಿ ಹಲವು ವರ್ಷಗಳಿಂದ ನಿಷ್ಠಾವಂತರಾಗಿ ಕೆಲಸ ಮಾಡುತ್ತಿರುವವರನ್ನು ಗುರುತಿಸಿ ಉನ್ನತ ಸ್ಥಾನಮಾನ ನೀಡಲಾಗುತ್ತಿದೆ ಎಂದು ಸಚಿ ಎನ್.ಎಸ್.ಬೋಸರಾಜು ಹೇಳಿದರು.



ಪಟ್ಟಣದ ನಗರ ಯೋಜನಾ ಪ್ರಾಧಿಕಾರ ಕಚೇರಿಯಲ್ಲಿ ನೂತನ ಅಧ್ಯಕ್ಷ ಹಾಗೂ ಸದಸ್ಯರ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಪಟ್ಟಣದ ಜನಸಂಖ್ಯೆಗೆ ಅನುಗುಣವಾಗಿ ಮೂಲಸೌಕರ್ಯ ಕಲ್ಪಿಸಲು ಮುಂದಾಗಿರುವ ಸರ್ಕಾರ, ಮಾನ್ವಿ ಅಭಿವೃದ್ಧಿಗೆ 10 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದೆ. ಹಾಗೆಯೇ, ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ 53 ಕೋಟಿ ರೂ. ವೆಚ್ಚದಲ್ಲಿ ಅಮೃತ-2 ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಅಲ್ಲದೆ, ನೀರಿನ ವ್ಯವಸ್ಥೆ ಸುಧಾರಣೆಗಾಗಿ ತುಂಗಭದ್ರಾ ನದಿಯಲ್ಲಿ ಪಂಪಿಂಗ್ ಸಾಮರ್ಥ್ಯವನ್ನು ಹೆಚ್ಚಿಸಲು ಹೊಸ ಪಂಪಿಂಗ್ ಯಂತ್ರಗಳು ಮತ್ತು ಪೈಪ್‌ಲೈನ್‌ಗಳನ್ನು ಅಳವಡಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು. ಎಲ್ಲ ಇಲಾಖೆಗಳ ಸೇವೆ ಒಂದೇ ಕಡೆ ದೊರೆಯುವುದಕ್ಕಾಗಿ 15 ಕೋಟಿ ರೂ. ವೆಚ್ಚದಲ್ಲಿ ಮಿನಿ ಆಡಳಿತ ಭವನ ನಿರ್ಮಾಣ ಕಾಮಗಾರಿಯೂ ಪ್ರಗತಿಯಲ್ಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹೊಸ ಲೇಔಟ್‌ಗಳಿಗೆ ಮಂಜೂರಾತಿ ನೀಡುವಾಗ ಪುರಸಭೆ ಹಾಗೂ ನಗರ ಯೋಜನಾ ಪ್ರಾಧಿಕಾರವು ಸಮನ್ವಯದಿಂದ ಕೆಲಸ ಮಾಡಿ, ಕಳೆದ ಬಾರಿ ನಡೆದ ನ್ಯೂನತೆಗಳನ್ನು ಸರಿಪಡಿಸಿಕೊಂಡು ಜನರಿಗೆ ಅನುಕೂಲವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಇತ್ತೀಚೆಗೆ ಮಾರುಕಟ್ಟೆಯಲ್ಲಿ ಹತ್ತಿ ಬೆಲೆ ಕುಸಿದಿರುವ ಹಿನ್ನೆಲೆಯಲ್ಲಿ, ರೈತರು ಬೆಳೆದ ಹತ್ತಿಗೆ ಬೆಂಬಲ ಬೆಲೆ ದೊರೆಯುವಂತೆ ಮಾಡಲು ತಾಲ್ಲೂಕಿನಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲು ಹತ್ತಿ ಖರೀದಿ ಪ್ರಾಧಿಕಾರದವರು ಪರಿಶೀಲನೆ **(2ನೇಪುಟಕ್ಕೆ)**

## ಕಿತ್ತೂರು ರಾಣಿ ಚನ್ನಮ್ಮ ಅವರ ಧೈರ್ಯ, ಸಾಹಸ ಪ್ರತಿಯೊಬ್ಬ ಮಹಿಳೆಗೂ ಆದರ್ಶ: ಕುಮಾರಸ್ವಾಮಿ

**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.23–** ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಅವರು ತೋರಿದಂತಹ ಧೈರ್ಯ, ಸಾಹಸ ನಾಡಿನ ಪ್ರತಿಯೊಬ್ಬ ಮಹಿಳೆಗೂ ಆದರ್ಶವಾದದ್ದು, ಪ್ರತಿಯೊಬ್ಬ ಮಹಿಳೆಗೂ ಸ್ಫೂರ್ತಿದಾಯಕವಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ ಅವರು ಹೇಳಿದರು.




ಅಕ್ಟೋಬರ್ 23ರ ಗುರುವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಡೆದಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬಾಲ್ಯದಿಂದಲೇ ಕುದುರೆ ಸವಾರಿ, ಕತ್ತಿ ಬಳಸುವ ಪರಿಗಳ ಬಗ್ಗೆ ತರಬೇತಿ ಪಡೆದಿದ್ದರು. ಚನ್ನಮ್ಮ ಅವರು ತನ್ನ ರಾಜ್ಯದ ರಕ್ಷಣೆಗಾಗಿ ಬ್ರಿಟಿಷರ ವಿರುದ್ಧ ಹೋರಾಡಿದ ಮೊದಲ ಮಹಿಳೆ. ಚನ್ನಮ್ಮ ಅವರ ಜೀವನ ಮತ್ತು ಹೋರಾಟ ನಾಡಿನ ಪ್ರತಿಯೊಬ್ಬ ಮಹಿಳೆಗೂ ಸ್ಫೂರ್ತಿದಾಯಕವಾಗಿದೆ. ಮಹಿಳೆಯರು ಕೂಡ ಸ್ವಾವಲಂಬಿಗಳಾಗಿ ಶೋಷಣೆ ಹಾಗೂ ಅನ್ಯಾಯದ ವಿರುದ್ಧ ಹೋರಾಟ ಮಾಡುವಂತಹ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದರು.

ಈ ವೇಳೆ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಅವರು ಮಾತನಾಡಿ, ಕಿತ್ತೂರಿನ ರಾಣಿ ಚನ್ನಮ್ಮ ಅವರು ಬ್ರಿಟಿಷ್ ಸರ್ಕಾರದ ವಿರುದ್ಧ ಹೋರಾಟ ನಡೆಸಿ ದೇಶದ ಸ್ವಾತಂತ್ರ್ಯಕ್ಕಾಗಿ ಶ್ರಮಿಸಿದ್ದಾರೆ. ಸ್ವಾತಂತ್ರ್ಯದ ಕಿಚ್ಚು ಹಚ್ಚಿದ ಧೀರ ದಿಟ್ಟ ಮಹಿಳೆಯಾಗಿದ್ದ ಚೆನ್ನಮ್ಮ ಅವರು ಬ್ರಿಟಿಷ್ ಸರ್ಕಾರ ಜಾರಿಗೊಳಿಸಿದ್ದ ದತ್ತು ಮಕ್ಕಳಿಗೆ ಹಕ್ಕಿಲ್ಲ ಎಂಬ ಕಾಯ್ದೆಯನ್ನು ವಿರೋಧಿಸಿದರು. ಚೆನ್ನಮ್ಮನವರ ಜಯಂತಿಯನ್ನು ಕೇವಲ ಸರ್ಕಾರಿ ಕಚೇರಿಯಲ್ಲಿ ಮಾತ್ರವಲ್ಲ; ಪ್ರತಿ ಶಾಲೆಗಳಲ್ಲಿ, ಮನೆಮನೆಗಳಲ್ಲಿ ನಡೆಯುವಂತಾಗಬೇಕು. ಮುಂದಿನ ಪೀಳಿಗೆಗೆ ರಾಣಿ ಚೆನ್ನಮ್ಮರಂತಹ ವೀರ ಮಹಿಳೆಯರ ಆದರ್ಶಗಳನ್ನು ತಲುಪಿಸುವ ಕೆಲಸವಾಗಬೇಕಿದೆ ಎಂದರು. **(2ನೇಪುಟಕ್ಕೆ)**

## ಕಾಮಗಾರಿಯಲ್ಲಿ ಸಿಲುಕಿದ ಭಾರಿಗಾತ್ರದ ವಾಹನ : ವಾಹನ ಸವಾರರು ಪರದಾಟ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಅ.23–** ರಾಷ್ಟ್ರೀಯ ಹೆದ್ದಾರಿ 150 ಎ ಕಾಮಗಾರಿ ವಿಳಂಭ ಹಾಗೂ ಅರ್ಧಕ್ಕೆ ನಿಂತ ಕಾಮಗಾರಿಯಿಂದಾಗಿ ಭಾರಿಗಾತ್ರದ ವಾಹನ ಹೆದ್ದಾರಿಯಲ್ಲಿ ಸಿಲುಕಿಕೊಂಡಿದೆ. ಇದರಿಂದಾಗಿ ಟ್ರಾಫಿಕ್ ಜಾಮ್ ಆಗಿ ಕಿಲೋಮೀಟರ್ ವರೆಗೆ ವಾಹನಗಳು ಹೆದ್ದಾರಿಯಲ್ಲಿ ನಿಂತಿವೆ.



ಅಂದಾಜು 200 ಕೋಟಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯನ್ನು ಗುತ್ತಿಗೆ ಪಡೆದಿರುವ ಅಮ್ಮಾಪೂರು ಇನ್ಫ್ರಸ್ಟ್ರಕ್ಚೇಚರ್ ಪ್ರೈವೇಟ್ ಲಿಮಿಟೆಡ್ ಕಂಪನಿಯು ಕಾಮಗಾರಿಯನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ. ಕಳೆದ 2 ವರ್ಷದ ಹಿಂದೆ ಕಾಮಗಾರಿ ಆರಂಭವಾಗಿದೆ. ಆದರೆ ಇನ್ನುವರೆಗೆ ಕಾಮಗಾರಿ ಸಂಪೂರ್ಣಗೊಳಿಸಲು ಕಂಪನಿಗೆ ಸಾಧ್ಯವಾಗಿಲ್ಲ. ಅಲ್ಲದೇ ಕೆಲವು ರಾಜಕೀಯ ವ್ಯಕ್ತಿಗಳು ಕಟ್ಟಡಗಳನ್ನು ತೆರವುಗೊಳಿಸದೇ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದ್ದಾರೆ. ಇದರಿಂದಾಗಿ ಇನ್ನು ಅರ್ಧ ಕಾಮಗಾರಿ ಬಾಕಿ ಉಳಿದಿದೆ.

ಗುತ್ತಿಗೆ ಪಡೆದ ಕಂಪನಿಯು ನಿಧಾನಗತಿ ಕಾಮಗಾರಿಯಿಂದ ಹೆದ್ದಾರಿಯನ್ನು ಅಗೆದು ಹಾಗೆಯೇ ಬಿಟ್ಟಿದ್ದಾರೆ. ಇದರಿಂದಾಗಿ ಪ್ರತಿನಿತ್ಯ ಒಂದಿಲ್ಲೊಂದು ವಾಹನ ಹೆದ್ದಾರಿಯಲ್ಲಿ ಸಿಲುಕಿಕೊಂಡು ಪರದಾಡುತ್ತಿದ್ದಾರೆ. ಅಲ್ಲದೇ ಹೆಚ್ಚು ಅಪಘಾತಗಳು ಸಂಭವಿಸಿವೆ. 5 ರಿಂದ 6 ಜನ ಪ್ರಯಾಣಿಕರು ಮರಣಹೊಂದಿದ್ದಾರೆ. ಅಲ್ಲದೇ ಕಾಮಗಾರಿ ಸಂಪೂರ್ಣ ಕಳಪೆಯಾಗಿದೆ. ಗುತ್ತಿಗೆದಾರರನ್ನು ಬದಲಿಸಬೇಕೆಂದು ವಾಹನ ಸವಾರರು ಹಾಗೂ ಸಾರ್ವಜನಿಕರು ಆಗ್ರಹಿಸಿದ್ದಾರೆ.

**ಮೌನವಹಿಸಿದ ಹೆದ್ದಾರಿ ಪ್ರಾಧಿಕಾರ:** ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಿದ ಹೆದ್ದಾರಿ ಪ್ರಾಧೀಕಾರ ಕಾಮಗಾರಿ 2 ವರ್ಷ ವಿಳಂಭ ಹಾಗೂ ಕಳಪೆಯಾಗಿದ್ದರೂ ಸಹ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ ಗುತ್ತಿಗೆದಾರರು ಆಡಿದ್ದೇ ಆಟವಾಗಿದೆ. ಹಲವಾರು ಅಪಘಾತಗಳು ಸಂಭವಿಸಿತ್ತಿದ್ದರೂ ಅಧಿಕಾರಿಗಳು ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ತಾಕೀತು ಮಾಡದೇ ಮೌನಕ್ಕೆ ಶರಣಾಗಿದ್ದಾರೆ.

ಕಾಮಗಾರಿಯ ಬಗ್ಗೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಜೊತೆ ಚರ್ಚಿಸಿ ಆದಷ್ಟು ಬೇಗನೆ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚಿಸುತ್ತೇನೆ ಎಂದು ಲಿಂಗಸುಗೂರು ಉಪ ವಿಭಾಗ ಸಹಾಯಕ ಆಯುಕ್ತ ಬಸವಣೆಪ್ಪ ಕಲಶೆಟ್ಟಿ ತಿಳಿಸಿದರು.

### ಬ್ರಿಡ್ಜ್ ಕಂ ಬ್ಯಾರೇಜ್ ಯೋಜನೆ ಕುರಿತು ಡಿಸಿಎಂ ಡಿ.ಕೆ.ಶಿವಕುಮಾರ ಸಭೆ :

## ಆಂಧ್ರ ತೆಲಂಗಾಣದೊಂದಿಗೆ ಚರ್ಚೆ ಭರವಸೆ

**ರಾಯಚೂರು,ಅ.23–**ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣದ ಜನರಿಗೆ ಸಂಪರ್ಕ ಕಲ್ಪಿಸುವುದು, ಹಾಗೆಯೇ ಕುಡಿಯುವ ನೀರು, ನೀರಾವರಿ ಮತ್ತು ಅಂತರ್ಜಲ ವೃದ್ಧಿಗಾಗಿ ಉದ್ದೇಶಿಸಿರುವ ಚೀಕಲಪರ್ವಿ ಬ್ರಿಡ್ಜ್ ಕಂ ಬ್ಯಾರೇಜ್ ಮತ್ತು ಚಿಕ್ಕ ಮಂಚಾಲಿ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿಗಳ ಕುರಿತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳೊಂದಿಗೆ ಮಹತ್ವದ ಸಭೆ ನಡೆಸಿದರು. ರಾಯಚೂರಿನಲ್ಲಿ ಮಂತ್ರಾಲಯದ ಶ್ರೀಗುರು ರಾಘವೇಂದ್ರ ದೇವರ ಆಶೀರ್ವಾದ ಪಡೆದ ಬಳಿಕ, ಪದ್ಮನಾಭ ವಸತಿ ಗೃಹದಲ್ಲಿ ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು, ಶಾಸಕ ಬಸನಗೌಡ ದದ್ದಲ್ ಮತ್ತು ಸಂಸದ ಜಿ. ಕುಮಾರ ನಾಯಕ ಅವರ ಸಮ್ಮುಖದಲ್ಲಿ ಈ ಚರ್ಚೆ ನಡೆಯಿತು. ಕಳೆದ ವರ್ಷವೇ ರಾಜ್ಯ ಸರ್ಕಾರ ಸಚಿವ ಸಂಪುಟ ಸಭೆಯಲ್ಲಿ ಈ ಯೋಜನೆಗಳಿಗೆ, ಅದರಲ್ಲೂ ಮುಖ್ಯವಾಗಿ ಚಿಕ್ಕ ಮಂಚಾಲಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣಕ್ಕೆ ರೂ.158 ಕೋಟಿ ಅನುಮೋದನೆ ನೀಡಿತ್ತು. ಆದಾಗ್ಯೂ, ಆಂಧ್ರಪ್ರದೇಶ ಮತ್ತು ತೆಲಂಗಾಣ ಸರ್ಕಾರಗಳ ಆಕ್ಷೇಪಣೆಯಿಂದ ಕಾಮಗಾರಿಗಳು ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಡಿಸಿಎಂ ಈ ಸಭೆ ಕರೆದಿದ್ದರು.



ಕರ್ನಾಟಕ ನೀರಾವರಿ ನಿಗಮದ ಅಧಿಕಾರಿಗಳು ಸಭೆಯಲ್ಲಿ ಯೋಜನೆಗಳ ನೀಲನಕ್ಷೆಯನ್ನು ಪ್ರಸ್ತುತಪಡಿಸಿ ವಿವರಣೆ ನೀಡಿದರು. ಚಿಕ್ಕ ಮಂಚಾಲಿಯಲ್ಲಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಮಾಡಿದರೆ, ಆಂಧ್ರಪ್ರದೇಶದ ಕರ್ನೂಲು ಜಿಲ್ಲೆಯ ಸುಂಕೇಶ್ವರ ಬ್ರಿಡ್ಜ್ ಕಂ ಬ್ಯಾರೇಜ್‌ಗೆ ನೀರಿನ ಮಟ್ಟ ಕುಸಿತವಾಗುತ್ತದೆ ಎಂದು ಆಂಧ್ರ ಸರ್ಕಾರ ಆಕ್ಷೇಪ ವ್ಯಕ್ತಪಡಿಸಿದೆ ಎಂದು ಅಧಿಕಾರಿಗಳು ಉಪ ಮುಖ್ಯಮಂತ್ರಿಗಳಿಗೆ ತಿಳಿಸಿದರು. ಆದರೆ, ಈ ಕಾಮಗಾರಿಯಿಂದ ಅವರಿಗೆ ಯಾವುದೇ ತೊಂದರೆಯಿಲ್ಲ. ಬದಲಿಗೆ, ಮಳೆಗಾಲದಲ್ಲಿ ನದಿಗೆ ಹೆಚ್ಚಿನ ಒಳಹರಿವು ಬರುವುದರಿಂದ ಆ ಸಂದರ್ಭದಲ್ಲಿ ಹೆಚ್ಚಿನ ನೀರನ್ನು ಸಂಗ್ರಹಿಸಿ ಕುಡಿಯುವ ನೀರನ್ನು ಸರಬರಾಜು ಮಾಡಬಹುದು, ಇದು ಆಂಧ್ರಕ್ಕೆ ಯಾವುದೇ ಸಮಸ್ಯೆ ಉಂಟುಮಾಡುವುದಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದರು. ಇದೇ ರೀತಿ, ಚೀಕಲಪರ್ವಿ ಬ್ರಿಡ್ಜ್ ಕಂ ಬ್ಯಾರೇಜ್‌ಗೂ ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ಮಾಹಿತಿ ನೀಡಿದರು.

ಎರಡೂ ರಾಜ್ಯಗಳ ಆಕ್ಷೇಪಣೆಗಳನ್ನು ಆಲಿಸಿದ ಉಪ **(2ನೇಪುಟಕ್ಕೆ)**

## ಮೊದಲನೇಯ ಪುಟದಿಂದ

# ಸುಪ್ರೀಂಕೋರ್ಟಿನ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆತ ಪ್ರಕರಣ ಖಂಡಿಸಿ ಪ್ರತಿಭಟನೆ.

ಈ ದುಷ್ಕೃತ್ಯವು ಕೋಮುವಾದಿ ಫ್ಯಾಸಿಸ್ಟ್ ಶಕ್ತಿಗಳು ನಿತ್ಯ ಹರಡುತ್ತಿರುವ ಜಾತಿವಾದ, ಮನುವಾದಿ ಮತ್ತು ಕೋಮುವಾದಿ ಹೇಳಿಕೆಗಳ ಉತ್ತೇಜನದ ಫಲವಾಗಿದೆ. ಸಂಘ ಪರಿವಾರ ಮತ್ತು ಅದರ ಅಂಗಸಂಸ್ಥೆಗಳು ಹರಡಿದ ಕೋಮುವಾದಿ ಮತ್ತು ಜಾತಿವಾದಿ ವಿಷವು ದಲಿತ ನ್ಯಾಯಾಧೀಶರಾದ ಸಿಜೆಐ ಅವರನ್ನು ಸಹ ಬಹಿರಂಗವಾಗಿ ಗುರಿಯಾಗಿಸುವ ಹಂತವನ್ನು ತಲುಪಿರುವುದು ಇಡೀ ದೇಶದ ನಾಗರೀಕರಿಗೆ ಎಚ್ಚರಿಕೆ ಗಂಟೆಯಾಗಿದೆ ಎಂದರು.

ಈ ಪ್ರತಿಭಟನೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರುಗಳಾದ ಸೈಯದ್ ಮುಫ್ತಿ ಜಿಶಾನ್ ಹಸನ್ ಖಾದ್ರಿ, ಸೈಯದ್ ಅಕ್ಬರ್ ಸಾಬ್, ಸೈಯದ್ ಸಜ್ಜಾದ್ ಹುಸೇನ್ ಮತವಾಲೆ, ಹುಸೇನಪ್ಪ ಜಗ್ಲಿ, ಸೈಯದ್ ಖಾಲಿದ್ ಖಾದ್ರಿ, ಕಿರಿಲಿಂಗಪ್ಪ ಕವಿತಾಳ, ಶಿವರಾಜ ಜಾನೇಕಲ್, ಚಂದ್ರಶೇಖರ ಕುರ್ಡಿ, ಪ್ರಭುರಾಜ್ ಕೊಡ್ಲಿ, ತಿಪ್ಪಣ್ಣ ಬಾಗಲವಾಡ, ಮೂಕಪ್ಪ ಕಟ್ಟಿಮನಿ, ಎಂ.ಪ್ರವೀಣಕುಮಾರ, ಯಲ್ಲಪ್ಪ ಬಾದರದಿನ್ನಿ, ಶರಣಕುಮಾರ ಮುದ್ದಂಗುಡ್ಡಿ, ಪ್ರೀತಮ್ ಕೊಡ್ಲಿ, ಪಿ.ರವಿಕುಮಾರ, ಕಾಶೀನಾಥ ಕುರ್ಡಿ, ಶೇಖ್ ಫರೀದ್ ಉಮ್ರಿ, ಶೇಖ್ ಬಾಬಾ ಹುಸೇನ್, ಹನುಮಂತ ಕೋಟೆ, ಜಿಶಾನ್ ಅಖಿಲ್ ಸಿದ್ದಿಖಿ, ಸುಭಾನಬೇಗ್, ಶಿವರಾಜ ಹೊಸೂರು, ಯಲ್ಲಪ್ಪ ಸೀಕಲ್. ಸಂಪತರಾಜ್ ಪನ್ನೂರು. ತಿಪ್ಪಣ್ಣ ಜಾನೇಕಲ್ ಸೇರಿದಂತೆ ಅನೇಕ ದಲಿತಪರ, ಪ್ರಗತಿಪರ ಚಿಂತಕರು, ಮುಖಂಡರು ಭಾಗವಹಿಸಿದ್ದರು.

# ಬೂತ್ ಮಟ್ಟದ ಕಾರ್ಯಕರ್ತರೇ ನಿಜವಾದ ನಾಯಕರು: ಡಿ.ಕೆ.ಶಿವಕುಮಾರ್

ಅವರನ್ನು ಗುರುತಿಸಿ ಸಚಿವರನ್ನಾಗಿ ಮಾಡಿರುವುದು ನಿಮ್ಮ ಜಿಲ್ಲೆಗೆ ಹೆಮ್ಮೆಯ ವಿಷಯ," ಎಂದು ಕಾರ್ಯಕರ್ತರಿಗೆ ಹುರಿದುಂಬಿಸಿದರು.

ವೇದಿಕೆ ಮೇಲೆ ರಾಯಚೂರು ಲೋಕಸಭಾ ಸದಸ್ಯರಾದ ಜಿ. ಕುಮಾರ್ ನಾಯಕ್, ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಹಂಪಯ್ಯ ನಾಯಕ್ ಸಾಹುಕಾರ್, ಜಿಲ್ಲೆಯ ವಿಧಾನ ಪರಿಷತ್ ಸದಸ್ಯರು, ಇತರ ಶಾಸಕರು ಹಾಗೂ ಪಕ್ಷದ ಮುಖಂಡರುಗಳು ಉಪಸ್ಥಿತರಿದ್ದರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು, ಪರಿಷತ್ತಿನ ಸಭಾ ನಾಯಕರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್. ಬೋಸರಾಜು ಅವರೂ ಈ ಸಭೆಯಲ್ಲಿ ಉಪಸ್ಥಿತರಿದ್ದರು.ಸಭೆಯಲ್ಲಿ ಪಕ್ಷವನ್ನು ಬೂತ್ ಮಟ್ಟದಲ್ಲಿ ಬಲಪಡಿಸುವ ಮತ್ತು ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ಬಗ್ಗೆ ವಿಸ್ತೃತ ಚರ್ಚೆ ನಡೆಯಿತು.

# ಕಿತ್ತೂರು ರಾಣಿ ಚನ್ನಮ್ಮ ಅವರ ಧೈರ್ಯ, ಸಾಹಸ ಪ್ರತಿಯೊಬ್ಬ ಮಹಿಳೆಗೂ ಆದರ್ಶ: ಕುಮಾರಸ್ವಾಮಿ

ಈ ವೇಳೆ ಉಪನ್ಯಾಸಕರಾಗಿ ಪರಮೇಶ್ವರ ಸಾಲಿಮಠ ಅವರು ಮಾತನಾಡಿ, ಕಿತ್ತೂರು ರಾಣಿ ಚೆನ್ನಮ್ಮನವರ ಧೈರ್ಯ, ಹೋರಾಟ, ಸ್ವಾಭಿಮಾನ ಮಹಿಳಾಕುಲಕ್ಕೆ ಸ್ಫೂರ್ತಿದಾಯಕವಾದುದು. ಬ್ರಿಟಿಷರ ವಿರುದ್ಧ ವೀರಾವೇಷದಿಂದ ಹೋರಾಡಿ ವೀರಮರಣವನ್ನಪ್ಪಿದ ಚೆನ್ನಮ್ಮನವರ ತ್ಯಾಗ, ಆದರ್ಶ ನಮ್ಮೆಲ್ಲರಿಗೂ ದಾರಿದೀಪವಾಗಿದೆ. ಅಂತಹ ಹೋರಾಟಗಾರ್ತಿ ನಮ್ಮ ಕನ್ನಡನಾಡಿನವರು ಎಂದು ಹೇಳಿಕೊಳ್ಳಲು ಬಹಳ ಹೆಮ್ಮೆಯಾಗುತ್ತದೆ. ವೀರವನಿತೆ ಕಿತ್ತೂರು ರಾಣಿ ಚೆನ್ನಮ್ಮನವರ ಜಯಂತಿಯನ್ನು ಸರ್ಕಾರದಿಂದ ಆಚರಣೆ ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ್, ಸಮಾಜದ ಮುಖಂಡರಾದ ಚಂದ್ರಶೇಖರ ಪಾಟೀಲ್ ಮಿರ್ಜಾಪುರ, ಹರಿವಿ ನಾಡಗೌಡ, ನಿರ್ಮಲ ಬೆಣ್ಣೆ, ವಿಜಯಲಕ್ಷ್ಮಿ ದೇಸಾಯಿ, ಮಹಾಂತೇಶ್ ಪಾಟೀಲ್, ಈರಮ್ಮ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಹ ಕಾರ್ಯದರ್ಶಿ ದಂಡಪ್ಪ ಬಿರಾದಾರ್ ಸೇರಿದಂತೆ ಇತರರು ಇದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಸಂಗಮೇಶ್ ಹಾಗೂ ಪ್ರಾರ್ಥನೆಯನ್ನು ಪ್ರತಿಭಾ ಗೋನಾಳ ಅವರು ಮಾಡಿದರು.

### ಬ್ರಿಡ್ಜ್ ಕಂ ಬ್ಯಾರೇಜ್ ಯೋಜನೆ ಕುರಿತು ಡಿಸಿಎಂ ಡಿ.ಕೆ.ಶಿವಕುಮಾರ ಸಭೆ :

# ಆಂಧ್ರ ತೆಲಂಗಾಣದೊಂದಿಗೆ ಚರ್ಚೆ ಭರವಸೆ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಆಂಧ್ರಪ್ರದೇಶ ಮತ್ತು ತೆಲಂಗಾಣ ಸರ್ಕಾರಗಳೊಂದಿಗೆ ಈ ಕುರಿತು ಮಾತುಕತೆ ನಡೆಸಿ, ಎರಡೂ ರಾಜ್ಯಗಳ ಸಹಮತದೊಂದಿಗೆ ಕಾಮಗಾರಿ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಅಲ್ಲದೆ, ತಾಂತ್ರಿಕ ವರದಿಯೊಂದಿಗೆ ಕಾಮಗಾರಿಯನ್ನು ನಿರ್ಮಿಸಲಾಗುವುದು ಎಂದು ತಿಳಿಸಿದರು. ಈ ವೇಳೆ ಸಣ್ಣ ನೀರಾವರಿ ಸಚಿವರಾದ ಎನ್.ಎಸ್. ಬೋಸರಾಜು ಮತ್ತು ಶಾಸಕ ಬಸನಗೌಡ ದದ್ದಲ್ ಅವರು ಕಾಮಗಾರಿಗಳ ಅವಶ್ಯಕತೆ ಮತ್ತು ನಿರ್ಮಾಣದ ಬಗ್ಗೆ ಡಿಸಿಎಂ ಅವರಿಗೆ ಮಾಹಿತಿ ನೀಡಿದರು. ಸಭೆಯಲ್ಲಿ ರಾಯಚೂರು ಲೋಕಸಭೆ ಸಂಸದ ಜಿ. ಕುಮಾರ ನಾಯಕ, ಶಾಸಕರಾದ ಹಂಪಯ್ಯ ನಾಯಕ, ತುರುವಿಹಾಳ ಬಸನಗೌಡ, ಹಾಗೂ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ, ಎ. ವಸಂತ ಕುಮಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರನ್ನು ಗುರುತಿಸಿ ಮಣೆ: ಬೋಸರಾಜು

ನಡೆಸಿದ್ದಾರೆ ಎಂದು ಸಚಿವರು ರೈತರಿಗೆ ಭರವಸೆ ನೀಡಿದರು. ಶಾಸಕ ಹಂಪಯ್ಯ ನಾಯಕ ಅವರು ಸಹ ಕಾರ್ಯಕ್ರಮದಲ್ಲಿ ಮಾತನಾಡಿದರು. ಸಚಿವರು ಮತ್ತು ನೂತನ ಅಧ್ಯಕ್ಷರನ್ನು ಕಾಂಗ್ರೆಸ್ ಕಾರ್ಯಕರ್ತರು ಬೃಹತ್ ಬೈಕ್ ರ್ಯಾಲಿ ಮೂಲಕ ಕರೆತಂದು ಭಾರಿ ಸ್ವಾಗತ ನೀಡಿದರು.

ಕಾರ್ಯಕ್ರಮದಲ್ಲಿ ನಗರ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶರಣಪ್ಪ, ಗ್ಯಾರಂಟಿ ಸಮಿತಿ ತಾ. ಅಧ್ಯಕ್ಷ ಬಿ.ಕೆ.ಅಮರೇಶಪ್ಪ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ದೊಡ್ಡಬಸಪ್ಪಗೌಡ ಭೋಗಾವತಿ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ರಾಜ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ರವರಿಗೆ ರೈತ ಮುಖಂಡರಿಂದ ಮನವಿ



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.23–** ಮಂತ್ರಾಲಯ ಶ್ರೀ ರಾಘವೇಂದ್ರ ಮಠದಲ್ಲಿನ ಶ್ರೀ ಶ್ರೀರಾಘವೇಂದ್ರ ಸ್ವಾಮಿಗಳ ದರ್ಶನಕ್ಕಾಗಿ ಆಗಮಿಸಿದ ರಾಜ್ಯ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ ರವರನ್ನು ಬುಧುವಾರ ಮಂತ್ರಾಲಯದಲ್ಲಿ ಭೇಟಿ ಮಾಡಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವತಿಯಿಂದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿಪಾಟೀಲ್ ಬೆಟ್ಟದೂರು ಮನವಿ ಸಲ್ಲಿಸಿ ಮಾತನಾಡಿ ತುಂಗಭದ್ರ ಜಲಾಶಯದ ಗೇಟ್ ಗಳನ್ನು ರಾಜ್ಯ ಸರ್ಕಾರ ಬದಲಾಯಿಸುವುದಕ್ಕೆ ಹಾಗೂ ದುರಸ್ತಿ ಮಾಡುವುದಕ್ಕೆ ಹೊರಾಟಿರುವುದರಿಂದ ರೈತರ ಎರಡನೇ ಬೆಳೆಗೆ ನೀರುದೊರೆಯದೆ ರೈತರು ನಷ್ಟ ಅನುಭವಿಸುತ್ತಾರೆ. ಅದ್ದರಿಂದ ತುಂಗಭದ್ರ ಜಲಾಶಯದಿಂದ ರೈತರ ಎರಡನೇ ಬೆಳೆಗೆ ನೀರು ಬಿಟ್ಟ ನಂತರವೇ ಜಲಾಶಯದ ಗೇಟ್‌ಗಳನ್ನು ಬದಲಾಯಿಸುವ ಕಾಮಗಾರಿಯನ್ನು ಕೈಗೊಳ್ಳಬೇಕು. ನಾರಾಯಣಪುರ ಜಲಾಶಯದ ಎಲ್ಲಾ 17 ಗೇಟ್‌ಗಳನ್ನು ಮುಂಜಾಗ್ರತೆ ಕ್ರಮವಾಗಿ ದುರಸ್ತಿ ಕೈಗೊಳ್ಳಬೇಕು.

ತುಂಗಭದ್ರ ಜಲಾಶಯದ ಈ ಭಾಗದ ಕಾಲುವೆ ಕೆಳಭಾಗದ ಟೇಲ್ಯಾಂಡ್ ರೈತರ ಜಮೀನುಗಳಿಗೆ ಕಾಲುವೆಯಿಂದ ಸಮರ್ಪಕವಾಗಿ ನೀರು ದೊರೆಯುತ್ತಿಲ್ಲ ಅದ್ದರಿಂದ ಅಕ್ರಮ ಕಾಲುವೆ ನೀರು ಬಳಕೆದಾರರ ಮೇಲೆ ಕಾನೂನು ಕ್ರಮ ಕೈಗೊಳುವ ಮೂಲಕ ಕೊನೆ ಭಾಗದ ರೈತರ ಜಮೀನುಗಳಿಗೆ ನೀರು ತಲುಪುವಂತೆ ಕ್ರಮ ಕೈಗೊಳ್ಳಬೇಕು. ಜಲಾಶಯಗಳ ನೀರು ಹಂಚಿಕೆ ಸಮಸ್ಯೆಗಳ ನಿವಾರಣೆಗಾಗಿ ರೈತರ ಹಾಗೂ ರೈತ ಮುಖಂಡರ ಸಭೆಯನ್ನು ಕೂಡಲೆ ಕರೆಯಬೇಕು ಎಂದು ಒತ್ತಾಯಿಸಿದರು. ರೈತ ಮುಖಂಡರಾದ ವೆಂಕಟರಾವ್,ಲಿಂಗರೆಡ್ಡಿಗೌಡ,ಬಸವನಗೌಡ,ಸೂಗುರಯ್ಯಸ್ವಾಮಿ ಆರ್. ಎಸ್. ಮಠ, ಅಮರೇಶ ಸೇರಿದಂತೆ ಇನ್ನಿತರ ರೈತರು ಇದ್ದರು.

# ಕನಿಷ್ಠ ಬೆಂಬಲ ಬೆಲೆಯಡಿ ಹತ್ತಿ ಮಾರಾಟ: ನೋಂದಣಿ ಅವಧಿ ಅಕ್ಟೋಬರ್ 31ರವರೆಗೆ ವಿಸ್ತರಣೆ

**ರಾಯಚೂರು,ಅ.23–** ಹತ್ತಿ ಬೆಳೆಯುವ ರೈತರ ಹಿತದೃಷ್ಠಿಯಿಂದ ಕೇಂದ್ರ ಸರಕಾರದ ಜವಳಿ ಇಲಾಖೆಯವರ ವ್ಯಾಪ್ತಿಗೆ ಒಳಪಡುವ ಭಾರತೀಯ ಹತ್ತಿ ನಿಗಮ ನಿಯಮಿತ (The Cotton Corporation of India) ಹೊರಡಿಸಿರುವ 2025-26ನೇ ಬೆಲೆ ವರ್ಷದಲ್ಲಿ ಕನಿಷ್ಠ ಬೆಂಬಲ ಬೆಲೆ (MSP) ಅಡಿಯಲ್ಲಿ ಹತ್ತಿ ಮಾರಾಟ ಮಾಡಲು ಲಭ್ಯವಿರುವ "ಕಪಾಸ್ ಕಿಸಾನ್"ಮೊಬೈಲ್ ಅಪ್ಲೀಕೇಶನ್ ಮೂಲಕ ನೋಂದಾಯಿಸಿಕೊಳ್ಳಲು ನೋಂದಣಿ ಅವಧಿಯನ್ನು ಅಕ್ಟೋಬರ್ 31ರವರೆಗೆ ವಿಸ್ತರಿಸಲಾಗಿದೆ.

ನೋದಾಣಿಗಾಗಿ ಸರಳ ವಿಧಾನ ಅನುಸರಿಸಬೇಕು. ಕಪಾಸ್ ಕಿಸಾನ್ ಆಪ್ ಡೌನ್ಲೋಡ್ ಮಾಡಬೇಕು. ಭೂ ದಾಖಲೆಗಳಾದ ಪಹಣಿ, ಆಧಾರ್ ಕಾರ್ಡ್, ಕೃಷಿ ಇಲಾಖೆಯವತಿಯಿಂದ ನೋಂದಾಯಿಸಲಾದ ಎಫ್ ಐಡಿ ಸಂಖ್ಯೆ ಇವುಗಳನ್ನು ಬಳಸಿಕೊಂಡು ನೋಂದಾಯಿಸಬೇಕು.

ನೋಂದಾಯಿತ ರೈತರಿಂದ ಹತ್ತಿ ಖರೀದಿಯನ್ನು ಭಾರತೀಯ ಹತ್ತಿ ನಿಗಮ ಇವರ ಜಿನ್ನಿಂಗ್ & ಪ್ರಸ್ಸಿಂಗ್ ಕೆಲಸದ ಅಧಿಕೃತ ಭಾಗಿಧಾರರಾದ ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಜಿನ್ನಿಂಗ್ & ಪ್ರಸ್ಸಿಂಗ್ ಘಟಕದಲ್ಲಿ ಅ ಥವಾ ರೈತರು ತಮಗೆ ಹತ್ತಿರದ ಭಾರ'ತೀಯ ಹತ್ತಿ ನಿಗವು ನಿಯುಮಿತ ಇವರು ಸೂಚಿಸಿದ ಖಾಸಗಿ ಹತ್ತಿ ಜಿನ್ನಿಂಗ್ & ಪ್ರಸ್ಸಿಂಗ್ ಕಾರ್ಖಾನೆಗಳಿಗೆ ನೀಡ ಬಹುದಾಗಿದೆ.



ಹತ್ತಿಯ ಕನಿಷ್ಠ ಬೆಂಬಲ ಬೆಲೆ (MSP) ಮಧ್ಯಮ ಪ್ರಧಾನ ಹತ್ತಿಗೆ ಕ್ವಿಂಟಲ್‌ಗೆ ರೂಪಾಯಿ 7,710 ಮತ್ತು ಉದ್ದ ಪ್ರಧಾನ ಹತ್ತಿಗೆ ಕ್ವಿಂಟಲ್‌ಗೆ ರೂಪಾಯಿ 8,110 ಆಗಿದೆ. ಇನ್ನುಳಿದಂತೆ ಈ ಮೇಲಿನ ಧರಗಳಲ್ಲಿ ಬೆಲೆಯನ್ನು ಭಾರತೀಯ ಹತ್ತಿನಿಗಮ ನಿಯಮಿತ (CCI) ಅಧಿಕಾರಿಗಳು ರೈತರ ಹತ್ತಿಯ ಗುಣಮಟ್ಟವನ್ನು ಪರಿಶೀಲಿಸಿ ಧರ ನಿಗಧಿಪಡಿಸುವರು. ರೈತರು ತಮ್ಮ ಉತ್ಪನ್ನಗಳಿಗೆ ಉತ್ತಮ ಲಾಭ ಪಡೆಯಲು ಬೆಂಬಲ ಬೆಲೆಯೋಜನೆಯ ಅಡಿಯಲ್ಲಿ ಹತ್ತಿಯನ್ನು ಮಾರಾಟ ಮಾಡುವಂತೆ ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘದ ಅಧ್ಯಕ್ಷರಾದ ಶ್ರೀ ಪತಂಗೆ ಜಯವಂತ್ ರಾವ್ ಹಾಗೂ ಉಪಾಧ್ಯಕ್ಷರಾದ ಶ್ರೀ ಶಶೀಧರ ಪಾಟೀಲ್, ಶ್ರೀ ಶೇಕ್ ಹುಸೇನ್ ವ್ಯವಸ್ಥಾಪಕ ನಿರ್ದೇಶಕರು, ಶ್ರೀ ಬಂದಯ್ಯ ಸ್ವಾಮಿ ಪ್ರಧಾನ ವ್ಯವಸ್ಥಾಪಕರು ಅವರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

# ದ್ವೇಷ ಮತ್ತು ಅಹಂಕಾರ ಮುಕ್ತ ಸಮಾಜ ನಿರ್ಮಾಣ ಮಾಡೋಣ : ಸಾಹಿತಿ ಶರಣಬಸಪ್ಪ ಫುಲೆ



**ಬೀದರ್, ಅ.23–** ಮಹಾತ್ಮ ಜ್ಯೋತಿಭಾ ಫುಲೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಸಂಘ ಸಂಸ್ಥೆ ವತಿಯಿಂದ ಧ್ಯಾನ ಹಾಗೂ 'ಬುದ್ಧ ಮತ್ತು ಧಮ್ಮ' ಕುರಿತ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಬೀದರ ನಗರದ ನೌಬಾದ್‌ನ ಶ್ರೀ ರಾಘವೇಂದ್ರ ಕಾಲೋನಿಯ ನಿವೇದಿತಾ ಹೂಗಾರ ಟ್ರೈನರ್ ಅಕಾಡೆಮಿ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಭಂತೆ ಜೀ ಅವರ ನೇತೃತ್ವದಲ್ಲಿ ನೆರವೇರಿಸಲಾಯಿತು. ಸಾಹಿತಿ ಶರಣಬಸಪ್ಪ ಫುಲೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅವರು ತಮ್ಮ ಭಾಷಣದಲ್ಲಿ "ದ್ವೇಷ ಮತ್ತು ಅಹಂಕಾರ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಶ್ರಮ ವಹಿಸಬೇಕು. ಇಂದಿನ ಯುಗದಲ್ಲಿ ಸುಖ, ಶಾಂತಿ, ನೆಮ್ಮದಿ ಮತ್ತು ಆರೋಗ್ಯ ಕಳೆದುಕೊಂಡಿದ್ದಾರೆ. ಧ್ಯಾನ ಮತ್ತು ಧಮ್ಮದ ಮಾರ್ಗದಿಂದ ಇವುಗಳನ್ನು ಮರಳಿ ಪಡೆಯಬಹುದು," ಎಂದು ಹೇಳಿದರು.

ಡಾ. ಕಾಶೀನಾಥ ಚಲ್ವಾ ಅವರು ಉದ್ಘಾಟಕರಾಗಿ ಬಂದು ಬುದ್ಧ ಮತ್ತು ಆತನ ಧಮ್ಮ ಪವಿತ್ರ ಗ್ರಂಥದ ಮಹತ್ವವನ್ನು ಸಂಕ್ಷಿಪ್ತವಾಗಿ ವಿವರಿಸಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ ಹುಲಸೂರು ತಹಸಿಲ್ದಾರರು ಶಿವಾನಂದ ಮೇತ್ರೆ ಅವರು "ಒಳ್ಳೆಯ ಕೆಲಸಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು" ಎಂದು ಹೇಳಿದರು.

ಮಾಸ್ಟರ್ ಮೈಂಡ್ ಟ್ರೈನರ್ ಶ್ರೀಮತಿ ಶ್ರೀದೇವಿ ಹೂಗಾರ ಅವರು "ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದು ಸಮಾಜದ ಮೂಲ ಅಸ್ತಿವಾರ" ಎಂದು ಅಭಿಪ್ರಾಯಪಟ್ಟರು. ಬಸವಕಲ್ಯಾಣದ ಶಿಕ್ಷಕಿ ಉಷಾ ಯಾದಾರಾವ್ ಗಾಯಕ್ವಾಡ್ ಹಾಗೂ ಕಲ್ಲಪ್ಪ ಕೈವಾರೆ ಅವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಭರತ್ ಕಾಂಬಳೆ, ಧನರಾಜ್ ಮುಸ್ತಪುರೆ, ಶಕ್ತಿಕಾಂತ್ ಭಾವಿದೊಡ್ಡಿ, ನಿಂಗಪ್ಪ ನಿಣ್ಣೆ, ಪ್ರದೀಪ್ ನಾಟೇಕರ್, ಪ್ರಕಾಶ್ ರಾವಣ್, ಶಂಭುಲಿಂಗ ವಾಲ್ದೊಡ್ಡಿ, ರಾಜಕುಮಾರ ಜಾಂತಿಕರ ಮೊದಲಾದವರಿಗೆ ಸನ್ಮಾನಿಸಲಾಯಿತು.

ಪ್ರತಿಭಾ ಪುರಸ್ಕಾರವಾಗಿ ಪ್ರಸನ್ನ ಕುಮಾರಿ, ಪ್ರಕೃತಿ, ಅಶ್ವಿನಿ ಮತ್ತು ಇತರ ವಿದ್ಯಾರ್ಥಿಗಳಿಗೆ ಗೌರವಿಸಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮವನ್ನು ಕಲಾವಿದರಾದ ಪ್ರೇಮಲತಾ ದೊಡ್ಡಿ ಹಾಗೂ ಜಗದೇವಿ ಫುಲೆ ನಡೆಸಿಕೊಟ್ಟರು. ಕಾರ್ಯಕ್ರಮದ ನಿರೂಪಣೆಯನ್ನು ರಾಜಕುಮಾರ ಕರುಣಾಸಾಗರ್ ನೆರವೇರಿಸಿದರು.

# ಜೆ.ಡಿ.ಎಸ್ ಪಕ್ಷವನ್ನು ಸದೃಡವಾಗಿ ಸಂಘಟಿಸಿ: ರಾಜಾ ವೆಂಕಟಪ್ಪ ನಾಯಕ



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.23–**ಪಟ್ಟಣದ ಜಾತ್ಯತೀತ ಜನತದಳ ಪಕ್ಷದ ಕಾರ್ಯಾಲಯದಲ್ಲಿ ಬುಧುವಾರ ಪಕ್ಷದ ನೂತನ ಪದಾಧಿಕಾರಿಗಳನ್ನು ನೇಮಕ ಗೊಳಿಸಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ನೇಮಕಾತಿ ಪತ್ರಗಳನ್ನು ವಿತರಿಸಿ ಮಾತನಾಡಿ ಮಾನ್ವಿ ಮತ್ತು ಸಿರವಾರ ತಾಲೂಕುಗಳಲ್ಲಿ ಜೆ.ಡಿ.ಎಸ್.ಪಕ್ಷವನ್ನು ಸದೃಡವಾಗಿ ಸಂಘಟಿಸುವ ಮೂಲಕ ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತರಬೇಕಾಗಿದೆ ಅದ್ದರಿಂದ ನೂತನವಾಗಿ ಪಕ್ಷದ ವಿವಿಧ ಹುದ್ದೆಗಳಿಗೆ ನೇಮಕವಾದವರು ತಾಲೂಕಿನಲ್ಲಿ ಕಾರ್ಯಕರ್ತರನ್ನು ಸಂಘಟಿಸಿ ಪಕ್ಷವನ್ನು ಬಲಪಡಿಸುವಂತೆ ಕರೆ ನೀಡಿದರು.

ಜೆ.ಡಿ.ಎಸ್.ಪಕ್ಷದ ತಾಲೂಕು ಉಪಾಧ್ಯಕ್ಷರಾಗಿ ಸದಾಶಿವ ಗೌಡ ಹಿರೆಕೊಟ್ನಕಲ್, ತಾಲೂಕು ಜೆಡಿಎಸ್ ಪಕ್ಷದ ವಕ್ತಾರರಾಗಿ ನಾಗರಾಜ್ ಭೋಗಾವತಿ, ತಾ. ಮಹಾ ಪ್ರಧಾನ ಕಾರ್ಯದರ್ಶಿಯಾಗಿ ಪಿ. ರವಿಕುಮಾರ್ ವಕೀಲರು, ತಾ.ಪ್ರ.ಕಾರ್ಯದರ್ಶಿಯಾಗಿ ಯಲ್ಲಪ್ಪ ನಾಯಕ ವಕೀಲರು, ತಾ. ಸಂ. ಕಾರ್ಯದರ್ಶಿಗಳಾಗಿ ಬಸನಗೌಡ ಬೆಟ್ಟದೂರು ,ಬಸವರಾಜ್ ಭಜಂತ್ರಿ , ಅಮರೇಶ್ ಗೌಡ ಖರಬದಿನ್ನಿ ,ನಗರ ಘಟಕದ ಕಾರ್ಯಧ್ಯಕ್ಷರಾಗಿ ಸುಭಾನ್ ಬೇಗ್ ರವರನ್ನು ಅಯ್ಕೆ ಮಾಡಲಾಯಿತು.

ಜೆ.ಡಿಎಸ್.ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ಮಾನ್ವಿ ಜೆ.ಡಿಎಸ್.ತಾ.ಅಧ್ಯಕ್ಷರಾದ ಡಾ.ಈರಣ್ಣ ಮರ್ಲಟಿ,ಸಿರವಾರ ಜೆ.ಡಿಎಸ್.ತಾ.ಅಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ಹೆಚ್,ಮೌನೇಶಗೌಡ, ಸೇರಿದಂತೆ ಮುಖಂಡರು ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111 9743496111

# ಪಾದಯಾತ್ರೆ ಹೆಸರಿನಲ್ಲಿ ಸಾರ್ವಜನಿಕರ ತೆರಿಗೆ ಹಣ ಪೋಲು- ಬಿಜೆಪಿ ಮುಖಂಡರ ಆರೋಪ

**ಆಳಂದ,ಅ.23–**ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನಲ್ಲಿ ವಿವಿಧ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ದಿ. 24ನೇ ಅಕ್ಟೋಬರ್ 2025 ರಿಂದ ದಿ. 31ನೇ ಅಕ್ಟೋಬರ್ 2025ರ ವರೆಗೆ ಗಾಂಧಿ ತತ್ವಗಳ ಪ್ರಸಾರ ಹೆಸರಿನಲ್ಲಿ ಕೆಲವು ವ್ಯಕ್ತಿಗಳು ಪಾದಯಾತ್ರೆ ಹಮ್ಮಿಕೊಂಡಿದ್ದು ಇದು ಸಂಪೂರ್ಣ ರಾಜಕೀಯ ಪ್ರೇರಿತವಾಗಿರುತ್ತದೆ ಎಂದು ಆಳಂದ ಬಿಜೆಪಿ ಮುಖಂಡರು ಆರೋಪಿಸಿದ್ದಾರೆ.

ಗುರುವಾರ ಆಳಂದ ಪಟ್ಟಣದ ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದ ಮುಖಂಡರು, ಇದೊಂದು ಖಾಸಗಿ ಕಾರ್ಯಕ್ರಮವಾಗಿದ್ದರೂ ಆಳಂದ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಕರ್ನಾಟಕ ಸರ್ಕಾರದ ಲಾಂಛನ ಹೊಂದಿರುವ, ಕರ್ನಾಟಕ ಸರ್ಕಾರದ ಹೆಸರಿರುವ, ಜಿಲ್ಲಾ ಪಂಚಾಯತ ಕಲಬುರಗಿ ಹೆಸರಿರುವ ಮತ್ತು ತಾಲೂಕಾ ಪಂಚಾಯತ ಕಾರ್ಯಾಲಯ ಆಳಂದ ಹೆಸರಿರುವ ನೋಟಿಸ್ ತೆಗೆದು ಆಯ್ದ ಗ್ರಾ.ಪಂ. ಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಸ್ವಚ್ಛತೆ ಮಾಡಲು, ಕಾರ್ಯಕ್ರಮಕ್ಕೆ ಹಾಜರಾಗಲು ಹಾಗೂ ಕಾರ್ಯಕ್ರಮಕ್ಕೆ ಅಗತ್ಯವಾದ ವ್ಯವಸ್ಥೆ ಮಾಡಲು ಮತ್ತು ಸಂಬಂಧಪಟ್ಟ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಪಾದಯಾತ್ರೆ ಜರುಗುವ ಸಮಯದಲ್ಲಿ ಯಾವುದೇ ಅಡಚಣೆಯಾಗದಂತೆ ಹಾಗೂ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಕ್ರಮವಹಿಸಲು ಆದೇಶ ಹೊರಡಿಸಿದ್ದಾರೆ ಎಂದು ಗುರುತರ ಆರೋಪ ಮಾಡಿದ್ದಾರೆ.

ಬಿ ಆರ್ ಪಾಟೀಲ ಶಾಸಕರ ಕಾರ್ಯಾಲಯ ತಾ: ಆಳಂದ ಜಿ: ಕಲಬುರಗಿಯ ಕಾರ್ಯದರ್ಶಿ ಹೆಸರಿನ ಮೇಲೆ ( 9449986 059) ಮೊಬೈಲ್ ಸಂಖ್ಯೆಯುಳ್ಳ ವ್ಯಕ್ತಿಯು ಶಾಸಕರ ಕಚೇರಿಯ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ಸರ್ಕಾರಿ ಕಚೇರಿಗಳನ್ನು ಹೈಜಾಕ್ ಮಾಡಿರುತ್ತಾರೆ. ಅಲ್ಲದೇ ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿರುತ್ತಾರೆ. ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕಾ ಪಂಚಾಯತ ಆಳಂದರವರಿಗೆ ಬ್ಲ್ಯಾಕ್‌ಮೇಲ್ ಮಾಡಿ ಕೆಎಂಎಫ್ ಅಧ್ಯಕ್ಷರಾದ ಆರ್ ಕೆ ಪಾಟೀಲರ ರಾಜಕೀಯ ಖಾಸಗಿ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿಗಳ ಎಲ್ಲಾ ಸಿಬ್ಬಂದಿಯವರು ಹಾಜರಾಗಿ ಈ ಕಾರ್ಯಕ್ರಮಕ್ಕೆ ಅಗತ್ಯವಾದ ವ್ಯವಸ್ಥೆ ಮಾಡಲು ಹಾಗೂ ಸಂಬಂಧಪಟ್ಟ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಪಾದಯಾತ್ರೆ ಕಾರ್ಯಕ್ರಮ ಜರುಗುವ ಸಂದರ್ಭದಲ್ಲಿ ಯಾವುದೇ ಅಡಚಣೆಯಾಗದಂತೆ ಹಾಗೂ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಕ್ರಮವಹಿಸಲು ಇಂತಹ ಪತ್ರ ಬರೆಯಲು ಒತ್ತಡ ಹೇರಿರುತ್ತಾರೆ ಎಂದು ಆಪಾದಿಸಿದರು.

ಆದ್ದರಿಂದ ಸರ್ಕಾರದ ಅಧಿಕಾರಿಗಳನ್ನು ಹೈಜಾಕ್ ಮಾಡಿರುವ ಈ ವ್ಯಕ್ತಿಯ ವಿರುದ್ಧ ಕಾನೂನಿನ ಪ್ರಕಾರ ಪ್ರಕರಣ ದಾಖಲಿಸಿ ಸರ್ಕಾರದ ಆಡಳಿತಕ್ಕೆ ಸೂಕ್ತ ರಕ್ಷಣೆ ನೀಡಬೇಕೆಂದು ಒತ್ತಾಯಿಸುತ್ತೇವೆ. ಶಾಸಕ ಬಿ ಆರ್ ಪಾಟೀಲರ ಅಣ್ಣನ ಮಗ ಆರ್ ಕೆ ಪಾಟೀಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಶಾಸಕರಲ್ಲದಿದ್ದರೂ ಸರ್ಕಾರದ ಯೋಜನೆಯ ವಿವಿಧ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದ್ದಾರೆ. ಅಧಿಕಾರಿಗಳು ಇಲ್ಲಿ ಶಿಷ್ಟಾಚಾರ ಪಾಲಿಸುತ್ತಿಲ್ಲ. ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದ ಮೂಲಕ ವಿತರಣೆ ಮಾಡುವ ಬೀಜಗಳನ್ನು ಮತ್ತು ಸ್ಪಿಂಕ್ಲರ್ ಪೈಪುಗಳನ್ನು ವಿತರಿಸುತ್ತಿದ್ದಾರೆ ಎಂದು ದಾಖಲೆ ಬಿಡುಗಡೆ ತೋರಿಸಿದರು.

ಅಲ್ಲದೇ ಬಿ ಆರ್ ಪಾಟೀಲ, ಶಾಸಕರು ಹಾಗೂ ಉಪಾಧ್ಯಕ್ಷರು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗರವರಿಗೆ ಶಾಸಕರ ಕಾರ್ಯಾಲಯ ಆಳಂದಕ್ಕೆ " ಕಾರ್ಯಲಯ ಕಾರ್ಯದರ್ಶಿ" ಯನ್ನು ಸರ್ಕಾರದಿಂದ ನೇಮಕ ಮಾಡಲಾಗಿದೆ ಯೇ?. ಒಂದು ವೇಳೆ ನೇಮಕ ಮಾಡಿದ್ದರೇ ಸದರಿ ಸಿಬ್ಬಂದಿಯ ಹೆಸರು ವಿಳಾಸ ಸಹಿತ ನೇಮಕಾತಿ ಆದೇಶದ ಪ್ರತಿ ಬಹಿರಂಗ ಪಡಿಸಲು ಒತ್ತಾಯಿಸಿದರು.

ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಆಳಂದ ಪಟ್ಟಣದಲ್ಲಿರುವ ಮಾಜಿ ಶಾಸಕ ಸುಭಾಷ ಗುತ್ತೇದಾರ ಒಡೆತನದ ಜೀವನ ಜ್ಯೋತಿ ಶಿಕ್ಷಣ ಮತ್ತು ಕಲ್ಯಾಣ ಸಂಸ್ಥೆ ಹಾಗೂ ಎಆ?ಜಿ ಫೌಂಡೇಶನ ಅಡಿಯಲ್ಲಿ ನಡೆಯುತ್ತಿರುವ ವಿವಿಧ ಶಾಲಾ ಕಾಲೇಜುಗಳ ಕಟ್ಟಡದ ಮೇಲೆ ಕಳೆದ ಮೂರು ದಿನಗಳಿಂದ ಅನಧಿಕೃತ ಡ್ರೋನ್ ಕ್ಯಾಮೆರಾ ಹಾರಾಟ ನಡೆಸಲಾಗುತ್ತಿದೆ. ರಾಜಕೀಯ ಹಗೆತನವನ್ನು ಸಾಧಿಸಲು ಶಾಸಕ ಬಿ ಆರ್ ಪಾಟೀಲ ಹಾಗೂ ಗುಮುಲ್ ಅಧ್ಯಕ್ಷ ಆರ್ ಕೆ ಪಾಟೀಲ ಸಂಸ್ಥೆಗಳ ಮೇಲೆ ಅನಧಿಕೃತ ಡ್ರೋನ ಕ್ಯಾಮೆರಾ ಮುಖಾಂತರ ವಿಡಿಯೋ ಚಿತ್ರಿಕರಣ ಮಾಡಿದ್ದಾರೆ. ಈ ಡ್ರೋನ್ ಕ್ಯಾಮೆರಾ ಸಂಸ್ಥೆಗಳ ಕಟ್ಟಡದಲ್ಲಿ ಹಾರಾಡುವುದನ್ನು ಸಿಬ್ಬಂದಿಯವರು ನೋಡಿ ಅದರ ಹಿಂದೆ ಹೋದಾಗ ಆ ಡ್ರೋನ್ ಕ್ಯಾಮೆರಾ ಶಾಸಕ ಬಿ ಆರ್ ಪಾಟೀಲರವರ ಆಳಂದ ಹೊಸ ಚೆಕ್ ಪೋಸ್ಟ್



ಹತ್ತಿರವಿರುವ ಶಾಸಕರ ಸಂಪರ್ಕ ಕಾರ್ಯಾಲಯದಲ್ಲಿ (ಐಚಿಟಿಜ)ಇಳಿಸಲಾಗಿದೆ.

ಪುಟ್ಟಸ್ವಾಮಿ ವರ್ಸೆಸ್ ಭಾರತ ಸರ್ಕಾರದ ಪ್ರಕರಣದಲ್ಲಿ ಭಾರತದ ಸರ್ವೋಚ್ಚ ನ್ಯಾಯಾಲಯವು ಭಾರತ ಸಂವಿಧಾನದ ಕಲಂ 21ರಡಿಯಲ್ಲಿ ಖಾಸಗಿತನವು ಮೂಲಭೂತ ಹಕ್ಕು ಎಂದು ಹೇಳಿದೆ. ಡ್ರೋನ್ ಕಾಯಿದೆ 2021ರ ಪ್ರಕಾರ ವ್ಯಕ್ತಿಗಳ ವೈಯಕ್ತಿಕ ಖಾಸಗಿತನಕ್ಕೆ ಧಕ್ಕೆ ತರುವಂತಿರಬಾರದು ಎಂದು ಸ್ಪಷ್ಟವಾಗಿ ಹೇಳಿದೆ. ಭಾರತೀಯ ನ್ಯಾಯ ಸಂಹಿತೆ 2023ರ ಪ್ರಕಾರ ದುರುದ್ದೇಶಪೂರಿತ ಕಾರಣದಿಂದ, ವೈಯಕ್ತಿಕವಾಗಿ ಗೂಢಚರ್ಯೆ ನಡೆಸುವುದು ಕ್ರಿಮಿನಲ್ ಅಪರಾಧವಾಗಿದೆ. ಅನುಮತಿಯಿಲ್ಲದೇ ಅನಧಿಕೃತವಾಗಿ ಖಾಸಗಿ ಆಸ್ತಿಗಳ ಮೇಲೆ ಅಥವಾ ವ್ಯಕ್ತಿಗಳ ಮೇಲೆ ಡ್ರೋನ್ ಹಾರಾಟ ನಡೆಸುವುದು ಕ್ರಿಮಿನಲ್ ಅಪರಾಧಕ್ಕೆ ಸಮನಾಗಿದೆ.

ಡ್ರೋನ್ ನಿಯಮ 2021ರ ಪ್ರಕಾರ DGCA Manadantes a " No Permission, No Takeoff" (NPNT) Policy for almost all drones. ಅನುಮತಿಯಿಲ್ಲದೇ ಡ್ರೋನ್ ಹಾರಿಸುವುದು ಅಪರಾಧವಾಗುತ್ತದೆ. ಖಾಸಗಿತನದ ಉಲ್ಲಂಘನೆಯ ಹಕ್ಕಿನ ಹಾಗೂ IT ACT 2000ರ ಪ್ರಕಾರ ನಿಯಮಗಳನ್ನು ಉಲ್ಲಂಘಿಸಿದ್ದರಿಂದ ಸೆಕ್ಷನ್ 43 ಅಥವಾ 66ರ ಪ್ರಕಾರ ಪ್ರಕರಣ ದಾಖಲಿಸಿ ತನಿಖೆ ನಡೆಸಬೇಕು.

ಆದ್ದರಿಂದ ಈ ಕೂಡಲೆ ಆ ಡ್ರೋನ್ ಕ್ಯಾಮೆರಾವನ್ನು ವಶಪಡಿಸಿಕೊಂಡು ಅದರ ಮಾಹಿತಿಯನ್ನು ಪರೀಶೀಲಿಸಬೇಕು. ಈ ಘಟನೆಯಿಂದ ನಮ್ಮ ಖಾಸಗಿ ಹಕ್ಕುಗಳ ಉಲ್ಲಂಘನೆಯಾಗಿದೆ, ಖಾಸಗಿ ಆಸ್ತಿಗಳ ಆವರಣದಲ್ಲಿ ಮಾಜಿ ಶಾಸಕರು ಪ್ರತಿದಿನ ಯೋಗಾಸನ (ಘಚಿಟಇುಟಿರ) ಸಲುವಾಗಿ ಶಾಲೆಯ ಆವರಣದಲ್ಲಿ ಹೋಗುತ್ತಿರುತ್ತಾರೆ. ಇವು ಎಲ್ಲಾ ಸನ್ನಿವೇಶಗಳು ನೋಡಿದರೆ ಯಾವುದೋ ಒಂದು ದೊಡ್ಡ ಹುನ್ನಾರವನ್ನು ರಚಿಸುತ್ತಿದ್ದಾರೆ ಅಲ್ಲದೇ ಮಾಜಿ ಶಾಸಕರ ಕೊಲೆ ಮಾಡುವ ಸಂಚು ಹೂಡಿದ್ದಾರೆ ಎಂದು ಮೇಲ್ನೋಟಕ್ಕೆ ಎದ್ದು ಕಾಣುತ್ತಿದೆ. ಇದರಿಂದ ಅವರ ಜೀವಕ್ಕೆ ಅಪಾಯವಿದೆ. ಏಕೆಂದರೆ, ಹತ್ತಾರು ವರ್ಷಗಳಿಂದ ನೀಡಿರುವ ಭದ್ರತೆ ಏಕಾಏಕಿ ಹಿಂಪಡೆದುಕೊಂಡಿರುವುದು ಹಾಗೂ ಶೈಕ್ಷಣಿಕ ಸಂಸ್ಥೆಗಳ ವಿಡಿಯೋ ಚಿತ್ರಿಕರಣ ಇವು ಎಲ್ಲಾ ಸನ್ನಿವೇಶಗಳು ನೋಡಿದರೆ ಹಲವು ಸಂಶಯಗಳಿಗೆ ದಾರಿ ಮಾಡಿಕೊಡುತ್ತಾಯಿದೆ. ಅದಕ್ಕೆ ವಿಡಿಯೋ ಚಿತ್ರಿಕರಣ ಮಾಡಿಕೊಂಡ ಶಾಸಕ ಬಿ.ಆರ್.ಪಾಟೀಲ ಹಾಗೂ ಗುಮುಲ್ ಅಧ್ಯಕ್ಷ ಆರ್.ಕೆ.ಪಾಟೀಲ ಮೇಲೆ ಭಾರತೀಯ ನಾಯ್ಯಸಂಹಿತೆ ಅಡಿಯಲ್ಲಿ ಪ್ರಕರಣ ದಾಖಲಿಸಿ ಅವರ ವಿರುದ್ಧ ಸೂಕ್ತ ಕಾನೂನಿನ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಗ್ರಾಮ ಪಂಚಾಯತಗಳು ಸ್ಥಳೀಯ ಸರ್ಕಾರಗಳು ಅಲ್ಲಿ ಅವರದೇ ಆದಂತಹ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು ಇರುತ್ತಾರೆ. ಅವರ್ಯಾರಿಗೂ ಅವಕಾಶವಿಲ್ಲದ ಖಾಸಗಿ ರಾಜಕೀಯ ವ್ಯಕ್ತಿ ತನ್ನ ವೈಯಕ್ತಿಕ ಹಿತಾಸಕ್ತಿಗೋಸ್ಕರ ಗ್ರಾಮ ಪಂಚಾಯತನಲ್ಲಿ ಅನೇಕ ಸಮಸ್ಯೆಗಳಿದ್ದರೂ, ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷೆ ಕೆಲಸ ಕಾರ್ಯಗಳ ಒತ್ತಡದಲ್ಲಿರುವ ಪಿ.ಡಿ.ಓಗಳಿಗೆ ಹಾಗೂ ಅಲ್ಲಿನ ಸಿಬ್ಬಂದಿಗಳಿಗೆ ವಿನಾಕಾರಣ ಮಾನಸಿಕ ಹಿಂಸೆ ನೀಡುವಂತೆ ಒತ್ತಡ ಹೇರಿರುವ ಖಾಸಗಿ ವ್ಯಕ್ತಿ ಶರಣಬಸಪ್ಪವಾಗೆ ಶಾಸಕರ ಕಾರ್ಯಾಲಯದ ಕಾರ್ಯದರ್ಶಿ ಎಂದು ಬ್ಲ್ಯಾಕ್‌ಮೇಲ್ ಮಾಡಿರುವ ಕೃತ್ಯಕ್ಕೆ ಇವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಮಳಖೇಡ ಗ್ರಾ.ಪಂ ಗ್ರಂಥಾಲಯ ಮೇಲ್ವಿಚಾರಕಿಯೊಬ್ಬರು ಈಗಾಗಲೇ ಕಚೇರಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದು ತಮಗೆ ತಿಳಿದ ವಿಷಯ. ಇಲ್ಲವಾದರೆ ಜಿಲ್ಲಾಡಳಿತದ ವಿರುದ್ಧ ಉಗ್ರ ಹೋರಾಟ ಕೈಗೊಳ್ಳಲಾಗುವುದು.ಪತ್ರಿಕಾಗೋಷ್ಠಿಯಲ್ಲಿ ಆಳಂದ ಮಂಡಲ ಬಿಜೆಪಿ ಮಾಜಿ ಅಧ್ಯಕ್ಷ ಆನಂದರಾವ ಪಾಟೀಲ, ಮುಖಂಡರಾದ ಬಾಬಾಸಾಹೇಬ ಪಾಟೀಲ, ಶ್ರೀಮಂತ ಸಾರವಾಡ, ಬಾಬುರಾವ ಸರಡಗಿ, ಪ್ರಕಾಶ ತೋಳೆ, ಪಿಂಟು ಝುಳಕಿ ಸೇರಿದಂತೆ ಇತರರು ಇದ್ದರು.

# ಇಂದು ಹೈಕೋರ್ಟ್ ಮತ್ತೆ ವಿಚಾರಣೆ ಆರ್.ಎಸ್.ಎಸ್ ಮನವಿ ಪತ್ರದ ಬೆನ್ನಲ್ಲೇ ಭೀಮ್ ಆರ್ಮಿ, ಪ್ಯಾಂಥರ್ ಅರ್ಜಿ



**ಕಲಬುರಗಿ, ಅ.23–** ಜಿಲ್ಲೆಯ ಚಿತ್ತಾಪುರ ಪಟ್ಟಣದಲ್ಲಿ ನ.2ರಂದು ಪಥ ಸಂಚಲನ ಕೈಗೊಳ್ಳುವುದಾಗಿ ಕಲಬುರಗಿ ಜಿಲ್ಲಾಧಿಕಾರಿಗಳಿಗೆ ಆರ್.ಎಸ್.ಎಸ್. ಮುಖಂಡರು ಮಂಗಳವಾರ ಮನವಿ ಪತ್ರ ಸಲ್ಲಿಸಿದ ಬೆನ್ನಲ್ಲೇ ಭೀಮ್ ಆರ್ಮಿ ಮತ್ತು ಭಾರತೀಯ ದಲಿತ ಪ್ಯಾಂಥರ್ ಸಂಘಟನೆಯ ಮುಖಂಡರು ಸಹ ಅದೇ ದಿನ ತಮಗೂ ಪಥ ಸಂಚಲನಕ್ಕೆ ಅವಕಾಶ ಮಾಡಿಕೊಡುವಂತೆ ಮನವಿ ಪತ್ರ ಸಲ್ಲಿಸಿರುವುದು ಇದೀಗ ತೀವ್ರ ಕುತೂಹಲ ಕೆರಳಿಸಿದೆ.

ಆರ್.ಎಸ್.ಎಸ್ ಬೆನ್ನಲ್ಲೇ ಭೀಮ್ ಆರ್ಮಿ ಮತ್ತು ದಲಿತ ಪ್ಯಾಂಥರ್ ಮನವಿ ಸಲ್ಲಿಸಿದ ಕಾರಣಕ್ಕಾಗಿ ಇದೀಗ ಪಥ ಸಂಚಲನ ಕುರಿತಂತೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿರುವ ಹಿನ್ನೆಲೆಯಲ್ಲಿ ಈಗಿನಿಂದಲೇ ಚಿತ್ತಾಪುರ ಪಟ್ಟಣದಲ್ಲಿ ವ್ಯಾಪಕ ಬಂದೋಬಸ್ತ್ ಮಾಡಿಕೊಳ್ಳಲು ಪೊಲೀಸ್ ಇಲಾಖೆ ಮುಂದಾಗಿದೆ. ಈ ಮಧ್ಯೆ, ಪಥ ಸಂಚಲನ ನಡೆಸುವ ಯಾವುದೇ ಸಂಘಟನೆಗೆ ಪ್ರತ್ಯೇಕ ದಿನಾಂಕಗಳನ್ನು ನೀಡುವಂತೆ ಈಗಾಗಲೇ ಕಲಬುರಗಿ ಹೈಕೋರ್ಟ್ ಪೀಠ ಜಿಲ್ಲಾಡಳಿತ ಮತ್ತು ರಾಜ್ಯ ಸರ್ಕಾರಕ್ಕೆ ಮೌಖಿಕವಾಗಿ ನಿರ್ದೇಶನ ನೀಡಿದ್ದರೂ ಒಂದೇ ದಿನ ಪಥ ಸಂಚಲನಕ್ಕೆ ಅವಕಾಶ ನೀಡುವಂತೆ ಎಲ್ಲ ಮೂರು ಸಂಘಟನೆಗಳ ಮುಖಂಡರು ಮನವಿ ಮಾಡಿರುವುದರಿಂದ ಜಿಲ್ಲಾಧಿಕಾರಿಗಳು ಈ ನಿಟ್ಟಿನಲ್ಲಿ ಯಾವ ನಿರ್ಧಾರ ಕೈಗೊಳ್ಳುತ್ತಾರೆ ಎಂಬುದರ ಮೇಲೆ ಎಲ್ಲರ ನಿಗಾ ನೆಟ್ಟಿದೆ.

ಈ ಮಧ್ಯೆ, ಒಂದೇ ದಿನ ಮೂರು ಮನವಿ ಪತ್ರಗಳು ಸಲ್ಲಿಕೆ ಆಗಿರುವ ಕಾರಣಕ್ಕಾಗಿ ಅನುಮತಿ ನೀಡುವ ಹಾಗೂ ನೀಡುವುದರಿಂದ ಎದುರಾಗಬಹುದಾದ ವಿದ್ಯಮಾನಗಳ ಕುರಿತು ಅಧ್ಯಯನ ಕೈಗೊಂಡು ವರದಿ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಸೇಡಂ ಸಹಾಯಕ ಆಯುಕ್ತರು ಹಾಗೂ ಚಿತ್ತಾಪುರ ತಹಸೀಲ್ದಾರ್ ಅವರಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದ್ದಾರೆ.

ಯಾರ್ಯಾರ ಮನವಿಯಲ್ಲಿ ಏನಿದೆ?

ಆರ್.ಎಸ್.ಎಸ್. ಮುಖಂಡರು ಕಲಬುರಗಿ ಹೈಕೋರ್ಟ್ ಪೀಠದ ನಿರ್ದೇಶನದಂತೆ ಅ.19ರಂದು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರನ್ನು ಭೇಟಿ ಮಾಡಿ ಲಿಖಿತ ಮನವಿ ಪತ್ರ ಸಲ್ಲಿಸಲು ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿದ್ದರಾದರೂ ಆ ದಿನ ಜಿಲ್ಲಾಧಿಕಾರಿಗಳು ಕಚೇರಿಯಲ್ಲಿ ಲಭ್ಯವಾಗದ ಕಾರಣ ಮನವಿ ಪತ್ರವನ್ನು ಇ-ಮೇಲ್ ಮತ್ತು ವಾಟ್ಸಾಪ್ ಮೂಲಕ ಸಲ್ಲಿಸಿದ್ದರು. ಈ ಮಧ್ಯೆ, ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ತೆರಳಿದ ಆರ್.ಎಸ್.ಎಸ್. ಮುಖಂಡರು ಮನವಿ ಪತ್ರವನ್ನು ಮತ್ತೊಮ್ಮೆ ಅಧಿಕೃತವಾಗಿ ಸಲ್ಲಿಸಿದರು.

ಒಟ್ಟು 600 ಸ್ವಯಂ ಸೇವಕರು ನ.2ರಂದು ಚಿತ್ತಾಪುರದಲ್ಲಿ ನಡೆಸಲು ಉದ್ದೇಶಿಸಿರುವ ಪಥ ಸಂಚಲನದಲ್ಲಿ ಪಾಲ್ಗೊಳ್ಳುತ್ತಿದ್ದು, ಎಲ್ಲರ ಕೈಯಲ್ಲೂ ಬಿದಿರಿನ ಲಾಠಿ ಇರಲಿವೆ ಎಂದು ಸ್ಪಷ್ಟವಾಗಿ ಆರ್.ಎಸ್.ಎಸ್ ಮುಖಂಡರು ಸಲ್ಲಿಸಿರುವ ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ ಎಂದು ಹೇಳಲಾಗಿದೆ.

ಇನ್ನೊಂದೆಡೆ, ಭೀಮ್ ಆರ್ಮಿ ಭಾರತ್ ಏಕತಾ ಮಿಷನ್ ರಾಜ್ಯ ಯುವ ಘಟಕದ ಮುಖಂಡರು ಸಲ್ಲಿಸಿರುವ ಮನವಿ ಪತ್ರದಲ್ಲಿಯೂ ಸಹ ಬಿದಿರಿನ ಕೋಲು, ಬೌದ್ಧ ಧರ್ಮದ ಪಂಚಶೀಲ ಧ್ವಜ ಹಾಗೂ ಸಂವಿಧಾನ ಪೀಠಿಕೆ ಹಿಡಿದು ಪಥ ಸಂಚಲನ ನಡೆಸುವುದಾಗಿ ಸ್ಪಷ್ಟವಾಗಿ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಏತನ್ಮಧ್ಯೆ, ತನ್ನ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಕೂಡ ಕೈಯಲ್ಲಿ ಬಿದಿರಿನ ಕೋಲು ಹಾಗೂ ಸಂವಿಧಾನದ ಪೀಠಿಕೆ ಹಿಡಿದು ಪಥ ಸಂಚಲನ ಕೈಗೊಳ್ಳುವುದಾಗಿ ದಲಿತ ಪ್ಯಾಂಥರ್ ಚಿತ್ತಾಪುರ ಘಟಕದ ಮುಖಂಡರು ಸಲ್ಲಿಸಿರುವ ಮನವಿ ಪತ್ರದಲ್ಲಿ ಮನದಟ್ಟು ಮಾಡಿಸಿದ್ದಾರೆ. ಎಲ್ಲರ ಮನವಿ ಪತ್ರಗಳನ್ನು ಸ್ವೀಕರಿಸಿರುವ ಜಿಲ್ಲಾಧಿಕಾರಿಗಳು ಅನುಮತಿ ನೀಡುವ ನಿರ್ಧಾರವನ್ನು ಇನ್ನೂ ಗೌಪ್ಯವಾಗಿರಿಸಿದ್ದಾರೆ.

# ಸಿಎಂ ಸಿದ್ದರಾಮಯ್ಯನವರಿಗೆ ಅಮವಾಸ್ಯೆಗೂ ಹುಣ್ಣಿಮೆಗೂ ವ್ಯತ್ಯಾಸ ಗೊತ್ತಿಲ್ಲ : ತೇಜಸ್ವಿ ಸೂರ್ಯ

**ಬೆಂಗಳೂರು, ಅ.23–**ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅಮವಾಸ್ಯೆಗೂ ಹುಣ್ಣಿಮೆಗೂ ವ್ಯತ್ಯಾಸ ಗೊತ್ತಿಲ್ಲ. ಅಮವಾಸ್ಯೆ ಇರುವ ದಿನ ಸಹ ಸೂರ್ಯ ಇರುತ್ತಾನೆ ಎಂದು ಸಂಸದ ತೇಜಸ್ವಿ ಸೂರ್ಯ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಿರುಗೇಟು ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ಬಗ್ಗೆ ಮುಖ್ಯವಂತ್ರಿ ವೈಯಕ್ತಿಕವಾಗಿ ಮಾತನಾಡಿದ್ದಾರೆ. ಅಮವಾಸ್ಯೆ ದಿನ ಚಂದ್ರ ಇರಲ್ಲ. ಈ ಚಂದ್ರನ ನೋಡಿ ಪೂಜೆ ಮಾಡುವವರ ಜೊತೆ ಇದ್ದು, ಸಿದ್ದರಾಮಯ್ಯ ಈ ರೀತಿ ಹೇಳಿರಬೇಕು. ಸೂರ್ಯ ಯಾವತ್ತು ಇರುತ್ತದೆ. ಸೂರ್ಯನ ಪೂಜೆ ಮಾಡುವವರಿಗೂ

ಚಂದ್ರನ ಪೂಜೆ ಮಾಡುವವ ವ್ಯತ್ಯಾಸ ತಿಳಿದು ಮಾತಾಡಲಿ ಎಂದು ಹೇಳಿದರು.ಮುಖ್ಯಮಂತ್ರಿ ಅವರ ಸ್ಥಾನಕ್ಕೆ ಶೋಭೆ ತರದೆ ಇರುವ ರೀತಿ ಟೀಕೆ ಮಾಡುತ್ತಾರೆ. ನಾನು ಸಿದ್ದರಾಮಯ್ಯ ಅವರ ಬಗ್ಗೆ ವಯಕ್ತಿಕವಾಗಿ ಮಾತಾಡಬಹುದು. ನಾನು 24 ಲಕ್ಷ ಜನರಿಂದ ಆಯ್ಕೆಯಾಗಿದ್ದೇನೆ. ನಾನು ವೈಯಕ್ತಿಕ ಟೀಕೆಗೆ ಹೋಗುವುದಿಲ್ಲ. ನಾನು ಸಿದ್ದರಾಮಯ್ಯ ಮೇಲೆ ವಯಕ್ತಿಕ ಟೀಕೆ ಮಾಡುವುದಿಲ್ಲ. ನಮ ಪಕ್ಷದ ಸಂಸ್ಕೃತಿ ಸಹ ಅದಲ್ಲ ಎಂದರು.

ಕರ್ನಾಟಕಕ್ಕೆ ಹಿಡಿದಿರುವ ಗ್ರಹಣ ನಿಮ ಆಡಳಿತ. ಬೆಂಗಳೂರಿಗರು ನರಕ ಯಾತನೆಯಲ್ಲಿದ್ದಾರೆ. ಗುಂಡಿ ಇಲ್ಲದ ಒಂದು ರಸ್ತೆ ಕೂಡ ಇಲ್ಲ. ರಸ್ತೆ ಗುಂಡಿಯೇ ನಿಮ ಆಡಳಿತ ವೈಖರಿ ತೋರಿಸುತ್ತದೆ ಎಂದು ಅವರು ಆರೋಪಿಸಿದರು.15 ಬಿಲಿಯನ್ ಡಾಲರ್ ಹೂಡಿಕೆ ಆಂದ್ರಕ್ಕೆ ಹೋಗಿದೆ. 2300 ರೈತರು ಆತಹತ್ಯೆ ಮಾಡಿಕೊಂಡಿದ್ದಾರೆ. ಸಾರಿಗೆ ನೌಕರರು ಸಂಬಳ ಇಲ್ಲದೆ ಪ್ರತಿಭಟನೆ ಮಾಡಿದ್ದಾರೆ. ಹಿಂದಿನ ಸರ್ಕಾರದ ಮೇಲ್ಸೆತುವೆ ಯೋಜನೆಯನ್ನು ಇಂದಿಗೂ ಮುಗಿಸಿಲ್ಲ. ಶಿಕ್ಷಕರ ನೇಮಕಾತಿ ಆಗುತ್ತಿಲ್ಲ. ವರ್ಗಾವಣೆ ದಂಧೆ ನಡೆಯುತ್ತಿದೆ ಎಂದು ಅವರು ಆರೋಪಿಸಿದರು.



ಬೆಂಗಳೂರಲ್ಲಿ ನಿವೇಶನಕ್ಕೆ ರೇಟ್ ಚಾರ್ಟ್ ಆಗುತ್ತಿದೆ. ಬಿಹಾರ್ ಚುನಾವಣೆಗೆ ಫಂಡಿಂಗ್ ನಲ್ಲಿ ಬ್ಯುಸಿ ಆಗಿದ್ದೀರಿ. ಮಿಗತೆ ಬಜೆಟ್ ನೀಡಿದ್ದು, ಬಿಜೆಪಿ. ನೀವು ಗುತ್ತಿಗೆದಾರರಿಗೆ ಹಣ ಕೊಟ್ಟಿಲ್ಲ. ನಿಮ ಶಾಸಕರೇ ಸರ್ಕಾರದ ವಿರುದ್ದ ಮಾತನಾಡುತ್ತಿದ್ದಾರೆ. 100 ರೂ. ಆದಾಯದಲ್ಲಿ 18 ರೂ. ಬಡ್ಡಿಗೆ ಹೋಗುತ್ತಿದೆ. ವಿವಿಧ ಇಲಾಖೆಗೆ ಮೀಸಲಿಟ್ಟ ಹಣಕ್ಕಿಂತ ಹೆಚ್ಚು ಗ್ಯಾರಂಟಿಗೆ ಖರ್ಚಾಗುತ್ತಿದೆ. ಇನ್ನೆರುಡುವರೆ ವರ್ಷದಲ್ಲಿ ರಾಜ್ಯಕ್ಕೆ ಹಿಡಿದ ಗ್ರಹಣ ಬಿಡಲಿದೆ. ರಾಜಕೀಯ ನಿವೃತ್ತಿ ಬಳಿಕ ನಿಮ ಕೊಡುಗೆ ಏನು? ರಾಜ್ಯವನ್ನು ಸಾಲದಲ್ಲಿ ಮುಳುಗುಸಿದ್ದಲ್ಲವೆ? ಎಂದು ಅವರು ವಾಗ್ದಾಳಿ ನಡೆಸಿದರು.

ಆರ್ಥಿಕವಾಗಿ ನಿಮಗೆ ನಂಬಿಕೆ ಇದ್ದರೆ ಶ್ವೇತ ಪತ್ರ ಹೊರಡಿಸಿ. ಕರ್ನಾಟಕ ಎಷ್ಟು ಸಾಲ ಮಾಡಿದೆ. ಎಷ್ಟು ಬಡ್ಡಿ ಕಟ್ಟಿದೆ, ಈಗ ಸಾಲದ ಹೊರೆ ಹೆಚ್ಚಿದೆಯಾ, ಕಡಿಮೆ ಇದೆಯಾ? ಎಂದು ಪ್ರಶ್ನಿಸಿದರು.ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ ಕಾಂಗ್ರೆಸ್?ನಲ್ಲಿ ಮ್ಯೂಸಿಕಲ್ ಚೇರ್ ನಡೆಯುತ್ತಿದೆ. ಕಾಂಗ್ರೆಸ್? ಸರ್ಕಾರ ಹೋಗೋವರೆಗೂ ಅದು ಸರಿಯಾಗಲ್ಲ. ಟನಲ್ ಯೋಜನೆಯೇ ಅವೈಜ್ಞಾನಿಕವಾಗಿದ್ದು,25000 ಕೋಟಿ ರೂ. ಖರ್ಚು ಮಾಡುತ್ತಿರುವುದು ಯಾರಿಗೋಸ್ಕರ? ಎಂದು ಅವರು ವಾಗ್ದಾಳಿ ನಡೆಸಿದರು.

# ಕನ್ಹೇರಿ ಶ್ರೀಗಳಿಗೆ ಸರ್ಕಾರ ಕೂಡಲೇ ಬಂಧಿಸಬೇಕು: ಕಿರಣ ಖಂಡ್ರೆ

**ಬೀದರ, ಅ.23–**ಬಸವ ಸಂಸ್ಕೃತಿ ಅಭಿಯಾನದ ಪೂಜ್ಯರಿಗೆ ಕಾಡಸಿದ್ದೇಶ್ವರ ಮಠದ ಕನ್ಹೇರಿ ಶ್ರೀಗಳು ಬಾಯಿಗೆ ಬಂದಂತೆ ಹಗುರವಾಗಿ ಅವಾಚ್ಯ ಶಬ್ದಗಳಿಂದ ಬೈದಿರುವುದು ತೀವ್ರ ಖಂಡನೀಯ. ಸರ್ಕಾರ ಕೂಡಲೇ ಅವರ ಮೇಲೆ ಸ್ವಯಂ ಪ್ರೇರಿತವಾಗಿ ಕೇಸ್ ದಾಖಲಿಸಿಕೊಂಡು ಬಂಧಿಸಬೇಕೆಂದು ಜಾಗತಿಕ ಲಿಂಗಾಯತ ಮಹಾಸಭೆಯ ರಾಜ್ಯ ಕಾರ್ಯದರ್ಶಿ ಕಿರಣ ಖಂಡ್ರೆ ಆಗ್ರಹಿಸಿದ್ದಾರೆ.

ಈ ಕುರಿತು ಬುಧವಾರ ನಗರದ ಜಿಲ್ಲಾ ಪತ್ರಿಕಾಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಬಸವ ಸಂಸ್ಕೃತಿ ಅಭಿಯಾನ ಮುಖ್ಯಮಂತ್ರಿಗಳ ಕೃಪಾಪೋಷಿತ ಕಾರ್ಯಕ್ರಮ, ಅವರನ್ನು ಮೆಟ್ಟಿನಿಂದ ಹೊಡೆಯಬೇಕು ಎಂದೆಲ್ಲ ಕೆಟ್ಟ ಭಾಷೆಗಳನ್ನು ಬಳಸಿರುವ ಕನ್ಹೇರಿ ಶ್ರೀಗಳಿಗೆ ಸರ್ಕಾರ ಕೂಡಲೇ ಬಂಧಿಸಬೇಕು. ನಮ್ಮದು ಸಿಎಂ ಕೃಪಾಪೋಷಿತ ಅಭಿಯಾನ ಅಲ್ಲ. ಅದು ವಿಶ್ವಗುರು ಬಸವೇಶ್ವರರ ಕೃಪಾಪೋಷಿತ, ಲಿಂಗಾನಂದ ಸ್ವಾಮಿಗಳ ಮತ್ತು ಮಾತೆ ಮಹಾದೇವಿಯವರ ಕೃಪಾಪೋಷಿತ ಅಭಿಯಾನವಾಗಿದೆ ಎಂದು ಕಿರಣ ಖಂಡ್ರೆ ಘಂಟಾಘೋಷವಾಗಿ ತಿಳಿಸಿದರು.

ಮುಂದುವರೆದು ಮಾತನಾಡಿದ ಕಿರಣ ಖಂಡ್ರೆಯವರು ಸ್ವತಃ ನಮ್ಮ ಹಣ ಖರ್ಚು ಅಭಿಯಾನಗಳಲ್ಲಿ ಪಾಲ್ಗೊಂಡಿದ್ದೇವೆ. ಪೂಜ್ಯ ಗದುಗಿನ ಶ್ರೀಗಳು, ಭಾಲ್ಕಿಶ್ರೀಗಳು ಸೇರಿದಂತೆ ಹಲವಾರು ಬಸವ ಭಕ್ತರು, ಪೂಜ್ಯರು ದೇಣಿಗೆ ನೀಡಿದ್ದಾರೆ. ಇದರಲ್ಲಿ ಯಾವುದೇ ರಾಜಕಾರಣಿಗಳ ಹಣ ನಾವು ಬಳಸಿಕೊಂಡಿಲ್ಲ. ಸರ್ಕಾರವೂ ನಮಗೆ ಸಹಾಯ ಮಾಡಿಲ್ಲ. ಕಾರ್ಯಕ್ರಮದ ಬಗ್ಗೆ ಲೆಕ್ಕ ಕೇಳುವ ನಿಮಗೆ ಯಾವ ನೈತಿಕತೆ ಇದೆ ಎಂದರು.

ವಿದೇಶಿ ಧರ್ಮಗಳಿಗೆ ನಮ್ಮ ದೇಶದಲ್ಲಿ ಮಾನ್ಯತೆ ಸಿಗುತ್ತದೆ. ಬೌದ್ಧ, ಜೈನ, ಕ್ರೈಸ್ತ, ಇಸ್ಲಾಂ ಮತ್ತು ಸಿಖ್ ಧರ್ಮಗಳು ಸ್ವತಂತ್ರ ಧರ್ಮದ ಮಾನ್ಯತೆ ಪಡೆದುಕೊಂಡಿವೆ. ಆದರೆ ಭಾರತದ ನೆಲದಲ್ಲಿಯೇ ಹುಟ್ಟಿಕೊಂಡ ಸ್ವತಂತ್ರ ಲಿಂಗಾಯತ ದರ್ಮಕ್ಕೆ ಮಾನ್ಯತೆ ಬೇಡ್ವಾ? ಎಂದು ಪ್ರಶ್ನಿಸಿದರು. ಇದೇ ರೀತಿ ಕನ್ಹೇರಿ ಶ್ರೀಗಳು ಹಗುರವಾಗಿ ಮಾಡನಾಡುತ್ತಿದ್ದರೆ ಎಲ್ಲಾ ಕಡೆ ಅವರ ಮೇಲೆ ಕೇಸ್ ದಾಖಲಿಸುತ್ತೇವೆ. ರಕ್ತ ಹರಿದರೂ ಚಿಂತೆಯಿಲ್ಲ ಧರ್ಮಕ್ಕಾಗಿ ಹಾಗೂ ದೇಶಕ್ಕಾಗಿ ನಿರಂತರವಾಗಿ ಹೋರಾಟ ಮಾಡುತ್ತೇವೆ. ಕನ್ಹೇರಿ ಶ್ರೀಗಳಿಗೆ ದೇವರು ಸದ್ಬುದ್ಧಿ ಕರುಣಿಸಲಿ ಎಂದು ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ನ್ಯಾಯವಾದಿಗಳಾದ ಶ್ರೀಕಾಂತ ಭೊರಾಳೆ, ವಿಶ್ವಗುರು ಬಸವ ಧರ್ಮ ಕೇಂದ್ರದ ಅಧ್ಯಕ್ಷ ಓಂಪ್ರಕಾಶ ರೊಟ್ಟೆ ಉಪಸ್ಥಿತರಿದ್ದರು.

# ಪ್ರತ್ಯೇಕ ಅಪಘಾತ: ನಾಲ್ವರು ಸಾವು

**ಕಲಬುರಗಿ,ಅ.23–**ನಗರದ ಹುಮನಾಬಾದ ರಿಂಗ್ ರಸ್ತೆಯ ಪೆಟ್ರೋಲ್ ಪಂಪ್ ಹತ್ತಿರ ಮತ್ತು ಜೇವರ್ಗಿ ತಾಲ್ಲೂಕಿನ ನೇದಲಗಿ ಬಳಿ ಮಂಗಳವಾರ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದಾರೆ.

ಹುಮನಾಬಾದ ರಿಂಗ್ ರಸ್ತೆಯ ಪೆಟ್ರೋಲ್ ಪಂಪ್ ಬಳಿ ಟ್ಯಾಂಕರ್ ಲಾರಿ ಡಿಕ್ಕಿ ಹೊಡೆದು ನಗರದ ಯದುಲ್ಲಾ ಕಾಲೋನಿಯ ಶೇಖ್ ಅಹ್ಮದ್ ಮತ್ತು ಸೈಯದ್ ಸರ್ವರ್ ಹುಸೇನಿ ತಂದೆ ಸೈಯದ್ ಇಬ್ರಾಹಿಂ ಹುಸೇನಿ ಅಲಿಯಾಸ್ ಜುಬೇರ್ ಎಂಬುವವರು ಮೃತಪಟ್ಟಿದ್ದು, ಜೇವರ್ಗಿ ತಾಲ್ಲೂಕಿನ ನೇದಲಗಿ ಬಳಿ ಕಾರು-ಟಂಟಂ ನಡುವೆ ಡಿಕ್ಕಿ ಸಂಭವಿಸಿ ಟಂಟಂನಲ್ಲಿದ್ದ ವಿಜಯಪುರ ಜಿಲ್ಲೆ ಸಿಂದಗಿ ತಾಲ್ಲೂಕಿನ ಬಾಷಾಸಾಬ್ (45) ಶಂಕ್ರೆಪ್ಪ (41) ಎಂಬುವವರು ಮೃತಪಟ್ಟಿದ್ದಾರೆ.

ಇವರು ಜಾಲವಾದಿ ಗ್ರಾಮದಿಂದ ಬಾರೆಹಣ್ಣು ತುಂಬಿಕೊಂಡು ಟಂಟಂನಲ್ಲಿ ಕಲಬುರಗಿ ಕಡೆ ಬರುತ್ತಿದ್ದಾಗ ಸಿಂದಗಿ ಕಡೆಗೆ ತೆರಳುತ್ತಿದ್ದ ಕಾರಿನ ನಡುವೆ ಡಿಕ್ಕಿ ಸಂಭವಿಸಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.


ಘಟನಾ ಸ್ಥಳಕ್ಕೆ ಸಿಪಿಐ ರಾಜೇಸಾಬ್ ನದಾಫ್, ಪಿಎಸ್‌ಐ ಚಿದಾನಂದ ಸವದಿ ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿದ್ದಾರೆ.

ಸಂಚಾರಿ ಪೊಲೀಸ್ ಠಾಣೆ-2 ಮತ್ತು ನೆಲೋಗಿ ಪೊಲೀಸ್ ಠಾಣೆಗಳಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿವೆ.

ಯುವ ಮಾರ್ಗ



## ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಅವರಿಗೆ ಸನ್ಮಾನಿಸಿದ ಬಯ್ಯಾಪೂರು



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಅ.23–** ಪಟ್ಟಣಕ್ಕೆ ಆಗಮಿಸಿದ ಮಾಜಿ ಸಚಿವೆ ಹಾಗೂ ಹಾಲಿ ವಿಧಾನ ಪರಿಷತ್ತು ಸದಸ್ಯೆಯಾದ ಉಮಾಶ್ರೀಯವರಿಗೆ ಮಾಜಿ ಸಚಿವ ಅಮರೇಗೌಡ ಪಾಟೀಲ್ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ತಮ್ಮ ಖಾಸಗಿ ಕಾರ್ಯಕ್ರಮಕ್ಕಾಗಿ ತೆರಳುವ ಮಾರ್ಗ ಮಧ್ಯೆ ವಿಧಾನ ಪರಿಷತ್ತು ಸದಸ್ಯ ಶರಣಗೌಡ ಪಾಟೀಲ್ ನಿವಾಸಕ್ಕೆ ಆಗಮಿಸಿ ಕುಷಲೋಪಚಾರಿ ವಿಚಾರಿಸಿ. ಪ್ರಸ್ತುತ ರಾಜಕೀಯ ವಿದ್ಯಾಮಾನದ ಬಗ್ಗೆ ಚರ್ಚಿಸಿದರು. ನಂತರ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ, ಗುಂಡಪ್ಪ ನಾಯಕ,ಬಸವ ರಾಜಗೌಡ ಗಣೇಕಲ್, ಶಶಿಧರ ಪಾಟೀಲ್, ರಾಜೂಗೌಡ ಜಾವೂರ, ಸೋಮಶೇಖರ ಐದನಾಳ, ಪ್ರಕಾಶ ಕುರಿ, ಜಗದೀಶ್ ಗೌಡ, ಗದ್ದೆಪ್ಪ ಚಲವಾದಿ, ಚನ್ನಾರೆಡ್ಡಿ ಬಿರಾದರ್ ಸೇರಿದಂತೆ ಇದ್ದರು.

## 1.46 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಅ.23–**ಮನೆ ಬೀಗ ಮುರಿದು 1,46,600 ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಕುಸನೂರ ರಸ್ತೆಯ ಪ್ರಶಾಂತ ನಗರ (ಬಿ) ಜಿಡಿಎ ಕಾಲೋನಿಯಲ್ಲಿ ನಡೆದಿದೆ.

ಮಣಿಸಿಂಗ್ ಚವ್ಹಾಣ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 40 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಉಂಗುರ, 8 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ಮೂಗಿನ ನತ್ತು, 20 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಕಿವಿಯೋಲೆ, 12 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ ಮಂಗಳಸೂತ್ರದಲ್ಲಿನ ಸಣ್ಣ ಗುಂಡುಗಳು, 6 ಸಾವಿರ ರೂ.ಮೌಲ್ಯದ 20 ತೊಲೆ ಬೆಳ್ಳಿಯ ಕಾಲು ಚೈನ, 600 ರೂ.ಮೌಲ್ಯದ 20 ಗ್ರಾಂ.ಬೆಳ್ಳಿ ಕಾಲುಂಗರ, 60 ಸಾವಿರ ರೂ.ನಗದು ಸೇರಿ 1.46 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.ಇವರು ಮನೆಗೆ ಬೀಗ ಹಾಕಿಕೊಂಡು ಕುಟುಂಬ ಸಮೇತ ಲಕ್ಷ್ಮೀಪೂರವಾಡಿಗೆ ಹೋಗಿದ್ದಾಗ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರತ್ಯೇಕ ಜೂಜಾಟ: 25 ಜನರ ಬಂಧನ

ಕಲಬುರಗಿ,ಅ.23–ನಗರದ ವಿವಿಧೆಡೆ ದಾಳಿ ನಡೆಸಿದ ಪೊಲೀಸರು 25 ಜನರನ್ನು ಬಂಧಿಸಿ 84,760 ರೂ ಜಪ್ತಿ ಮಾಡಿದ್ದಾರೆ.

ನಗರದ ನಂದೂರ ಇಂಡಸ್ಟ್ರಿಯಲ್ ಏರಿಯಾದಲ್ಲಿ ಮತ್ತು ಕಡಣಿ ಗ್ರಾಮದ ಕಾಳಪ್ಪರವರ ದನದ ಕೊಟ್ಟಿಗೆಯಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕ ಮತ್ತು ವಿಶ್ವವಿದ್ಯಾಲಯ ಠಾಣೆ ಪೊಲೀಸರು ಪ್ರತ್ಯೇಕವಾಗಿ ದಾಳಿ ನಡೆಸಿ 17 ಜನರನ್ನು ಬಂಧಿಸಿದ್ದಾರೆ.

ಕಡಣಿ ಗ್ರಾಮದ ಕಾಳಪ್ಪರವರ ದನದ ಕೊಟ್ಟಿಗೆಯಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ಭೋಜರಾಜ ರಾಠೋಡ್, ಸಿಬ್ಬಂದಿಗಳಾದ ಸಾಜಿದ್ ಪಾಷಾ, ಮೈಬೂಬ್, ಮಂಜುನಾಥ, ತಿರುಪತಿ, ಎಂ.ಆರ್.ಪಟೇಲ್ ಅವರು ದಾಳಿ ನಡೆಸಿ ಹಣಮಂತರಾಯ ಚಲಗೇರಿ, ದೇವರಾಯ ದ್ಯಾವಪ್ಪಗೋಳ, ದೇವಿಂದ್ರಪ್ಪ ನೂಕಾಣಿ, ಮಹಾದೇವಪ್ಪ ಮಾಡಿ, ನಾಗಣ್ಣ ಸೂರ್ಯಗೌಡರು, ಮಲ್ಲಿಕಾರ್ಜುನ ಸಿದ್ದಣ್ಣಗೌಡರು, ಶರಣಬಸಪ್ಪ ಕೊಳ್ಳುರ, ರಾಜು ದೇವನ್, ಉಮೇಶ್ ಬಿರೆದಾರ, ಗುಂಡೇರಾವ ಶಿವರಾಗೊಳ ಎಂಬುವವರನ್ನು ಬಂಧಿಸಿ 11060 ನಗದು, ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.ನಂದೂರ ಇಂಡಸ್ಟ್ರೀಯಲ್ ಏರಿಯಾದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಎಎಸ್ಐ ನಿಜಲಿಂಗಪ್ಪ, ಸಿಬ್ಬಂದಿಗಳಾದ ಸಂಜುಕುಮಾರ, ಈರಣ್ಣಾ, ಪ್ರಕಾಶ, ರಾಜಕುಮಾರ ಅವರು ದಾಳಿ ನಡೆಸಿ ಶಿವಕುಮಾರ ಹಂಗರಗಿ, ಸುನೀಲ ಮುದ್ದಡಗಿ, ರಾಹುಲ್ ಬಿಸೇ, ಖಾಜಾಮೈನೊದ್ದಿನ್, ಅರ್ಜುನ ಮಕ್ಕಳಕರ, ಅಮರನಾಥ ಬಿರಾದಾರ, ಪ್ರವೀಣ್ ಜಾನತಿ ಎಂಬುವವರನ್ನು ಬಂಧಿಸಿ 3,200 ರೂ.ನಗದು ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.

ಫರಹತಾಬಾದ ಮತ್ತು ವಿಶ್ವವಿದ್ಯಾಲಯ ಪೊಲೀಸ್ ಠಾಣೆಗಳಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿವೆ. ನಗರದ ಎಪಿಎಂಸಿ ಕಾಟನ್ ಮಾರ್ಕೆಟ್ ಹತ್ತಿರದ ಲಕ್ಷ್ಮೀ ದೇವಸ್ಥಾನ ಪಕ್ಕದಲ್ಲಿನ ಖಾಲಿ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಎಎ?ಐ ತಾರಾಸಿಂಗ್, ಸಿಬ್ಬಂದಿಗಳಾದ ಗುರುಮೂರ್ತಿ, ಶಿವಾನಂದ, ಬಂದೇನವಾಜ್, ಸಂಜೀವಕುಮಾರ, ಸಯ್ಯದ್ ತೌಸೀಫ್ ಹುಸೇನ್, ಅಭಿಷೇಕ್ ಅವರು ದಾಳಿ ನಡೆಸಿ 8 ಜನರನ್ನು ಬಂಧಿಸಿದ್ದಾರೆ.

# ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರ ಮೆರವಣಿಗೆಗೆ ಸಚಿವರಾದ ಎನ್.ಎಸ್.ಬೋಸರಾಜು ಚಾಲನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.23–** ಜಯಂತ್ಯುತ್ಸವದ ಅಂಗವಾಗಿ ಕಿತ್ತೂರು ರಾಣಿ ಚೆನ್ನಮ್ಮ ಅವರ ಭಾವಚಿತ್ರ ಮೆರವಣಿಗೆಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.



ನಗರದ ಬಸವೇಶ್ವರ ವೃತ್ತದಲ್ಲಿ ಅ.23 ರಂದು ನಡೆದ ಕಾರ್ಯಕ್ರಮದಲ್ಲಿ ಸಚಿವರು, ರಾಣಿ ಚೆನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಇದೆ ವೇಳೆ, ಜಗಜ್ಯೋತಿ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.

ಅಲ್ಲಿಂದ ಆರಂಭಗೊಂಡ ಮೆರವಣಿಗೆಯು ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ರಂಗಮಂದಿರಕ್ಕೆ ಬಂದು ಸೇರಿತು.

ಮೆರವಣಿಗೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾದ ಉಪ ಆಯುಕ್ತರಾದ ಸಂತೋಷ ರಾಣಿ, ಸಮಾಜದ ಮುಖಂಡರಾದ ಚಂದ್ರಶೇಖರ ಪಾಟೀಲ್ ಮಿರ್ಜಾಪುರ, ಹರಿವಿ ನಾಡಗೌಡ, ನಿರ್ಮಲ ಬೆಣ್ಣೆ, ವಿಜಯಲಕ್ಷ್ಮಿ ದೇಸಾಯಿ, ಮಹಾಂತೇಶ್ ಪಾಟೀಲ್, ಈರಮ್ಮ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಹ ಕಾರ್ಯದರ್ಶಿ ದಂಡಪ್ಪ ಬಿರಾದಾರ್ ಸೇರಿದಂತೆ ಪಾಲಿಕೆಯ ಸದಸ್ಯರು ಇದ್ದರು.

# ಸರ್ಕಾರದ ಆರೋಗ್ಯ ಸೇವೆ ಸದುಪಯೋಗವಾಗಲಿ: ಆರ್.ಬಸನಗೌಡ ತುರವಿಹಾಳ

ಯುವ ಮಾರ್ಗ ಸುದ್ದಿ

**ರಾಯಚೂರು,ಅ.23–**ಸರ್ಕಾರದ ವತಿಯಿಂದ ಬಡವರಿಗೆ ಗುಣ ಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುವ ಸದುದ್ದೇಶದಿಂದ ಗ್ರಾಮೀಣ ಪ್ರದೇಶಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರಗ ಳಲ್ಲಿಯೂ ಸಹ ಶಸ್ತ್ರಚಿಕಿತ್ಸೆ ಮೂಲಕ ಹೆರಿಗೆ ಸೇವೆ, ಮುತ್ರಪಿಂಡ ಸಮಸ್ಯೆಯಿಂದ ಬಳಲುವವರಿಗೆ ಡಯಾಲಿಸೀಸ್ ಸೇವೆ ನೀಡಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ ಅವರು ಹೇಳಿದರು.

ಅಕ್ಟೋಬರ್ 23ರ ಗುರುವಾರ ದಂದು ಜಿಲ್ಲೆಯ ಮಸ್ಕಿ ತಾಲೂಕಿನ ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಸುಸಜ್ಜಿತ ಡಯಾಲಿಸೀಸ್ ಕೇಂದ್ರ ಹಾಗೂ ಶಸ್ತ್ರ ಚಿಕಿತ್ಸಾ ಕೊಠಡಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆರಿಗೆ ಕ್ಲಿಷ್ಟಕರವಾದಲ್ಲಿ ತಾಯಿ ಮಗುವಿನ ಆರೋಗ್ಯ ದೃಷ್ಟಿಯಿಂದ ಶಸ್ತ್ರಚಿಕಿತ್ಸೆ ಮೂಲಕ ಹೆರಿಗೆ ಸೌಲಭ್ಯ, ಮೂತ್ರಪಿಂಡದ ಗಂಭಿರ ಸಮಸ್ಯೆಯಿಂದ ಆರ್ಥಿಕವಾಗಿ ಸಂಕಷ್ಟಕ್ಕಿಡಾಗುವುದನ್ನು ತಪ್ಪಿಸಲು ಡಯಾಲಿಸೀಸ್ ಸೇವೆಯನ್ನು ಪ್ರಾರಂಭಿಸಲಾಗಿದೆ. ಸಾಮಾನ್ಯವಾಗಿ ಒಂದು ಜೀವಕ್ಕೆ ಜನ್ಮ ನೀಡುವ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಗೆ ಒದಗಬಹುದಾದ ಗಂಡಾಂತರಕಾರಿ ಸನ್ನಿವೇಶದಲ್ಲಿ ಶಸ್ತ್ರಚಿಕಿತ್ಸೆಯ ಮೂಲಕ ಹೆರಿಗೆ ಮಾಡಿಸಲು ಎಷ್ಟೊ ಕುಟುಂಬಗಳು ಆರ್ಥಿಕ ತೊಂದರೆ ಅನುಭವಿಸುವ ಸಾಧ್ಯತೆಗಳನ್ನು ದೂರಮಾಡಲು ಹಾಗೂ ಮೂತ್ರಪಿಂಡದ ತೊಂದ ರೆಯಿಂದ ತಿಂಗಳು ಡಯಾಲಿಸೀಸ್ ಮಾಡಿಸಲು ದೊಡ್ಡದೊಡ್ಡ ನಗರಗಳಿಗೆ ತೆರಳುತ್ತಿರುವುದನ್ನು ತಪ್ಪಿಸಿ ಅವರಿಗೆ ಆರ್ಥಿಕ ಸಂಕಷ್ಟದಿಂದ ದೂರಮಾಡಲು ತುರ್ವಿಹಾಳ ಹಾಗೂ ಸುತ್ತಲಿನ 36 ಗ್ರಾಮಗಳು, 14 ಹಟ್ಟಿಗಳನ್ನೊಳಗೊಂಡಂತೆ ಎಲ್ಲ ಸಾರ್ವ ಜನಿಕರು ಅನಕೂಲಕ್ಕಾಗಿ ಎರಡು ಸೇವೆಗಳನ್ನು ಆರಂಭಿಸಲಾ



ಗಿದ್ದು, ಜನತೆ ಇದರ ಲಾಭವನ್ನು ಪಡೆಯಬೇಕೆಂದರು.

ಈ ವೇಳೆ ಪ್ರಾಸ್ತಾವಿಕವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ಅವರು ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವ, ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾ ಹಕ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಜಿಲ್ಲೆಯ ಎಲ್ಲ ತಾಲೂಕು ಗಳಲ್ಲಿ ಹೆರಿಗೆ ನಿರ್ವಹಣೆಗಾಗಿ ಪ್ರಸೂತಿ ತಜ್ಞರ, ಅರವಳಿಕೆ ತಜ್ಞರ ಹಾಗೂ ಮಕ್ಕಳ ತಜ್ಞರ ನೇಮಕಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಆಸ್ಪತ್ರೆಗಳಲ್ಲಿ ಗುಣಮಟ್ಟದ ಮೂಲಭೂತ ಸೌಕರ್ಯಗಳೊಂದಿಗೆ ಹೆರಿಗೆ, ಮಕ್ಕಳ ಆರೈಕೆ, ಶಸ್ತ್ರಚಿಕಿತ್ಸೆ, ಹಾಗೂ ಡಯಾಲಿಸೀಸ್ ಸೇವೆಯನ್ನು ನೀಡಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ತುರ್ವಿಹಾಳ ಪಟ್ಟಣ ಪಂಚಾಯತ ಅಧ್ಯಕ್ಷ ಬಾಪೂಗೌಡ ದೇವರಮನಿ, ಉಪಾಧ್ಯಕ್ಷರಾದ ಲಕ್ಷ್ಮಿ ಸೋಮನಾಥ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್, ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್, ತಾಲೂಕಾ ಆರೋಗ್ಯಾಧಿಕಾರಿ ಡಾ.ಅಯ್ಯನಗೌಡ, ಪ್ರಸೂತಿ ತಜ್ಞರಾದ ಡಾ.ನಾಗರಾಜ ಕಾಟ್ವಾ, ಡಾ.ಜೀವನಜ್ಯೋತಿ, ಅರವಳಿಕೆ ತಜ್ಞೆ ಡಾ.ಕೋನಿಕಾ, ಮಕ್ಕಳ ತಜ್ಞರು ಡಾ.ದೀಪಿಕಾ, ಡಾ.ವೀರುಪಾಕ್ಷಪ್ಪ ಸೇರಿದಂತೆ ಪಟ್ಟಣ ಪಂಚಾಯತ ಸದಸ್ಯರು, ಗ್ರಾಮಸ್ಥರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಯವರು ಇದ್ದರು.

# ಪ್ರಸಿದ್ಧ ಅದ್ಯಾತ್ಮ ಕೇಂದ್ರ ಪಂಚಮುಖಿಯ ಆಂಜನೇಯ ದೇವರ ದರ್ಶನ ಪಡೆದ ಡಿ.ಸಿ.ಎಂ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.23–**ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ದೀಪಾವಳಿ ಹಬ್ಬದ ಸಂಭ್ರಮದ ವೇಳೆ ಅಕ್ಟೋಬರ್ 22ರಂದು ರಾಯಚೂರಗೆ ಜಿಲ್ಲೆಗೆ ಭೇಟಿ ನೀಡಿ, ರಾಯಚೂರು ಗ್ರಾಮೀಣ ಪ್ರದೇಶದಲ್ಲಿನ ಗಾಣದಾಳ ಗ್ರಾಮದ ಹತ್ತಿರದ ಪಂಚಮುಖಿ ಆಂಜನೇಯ ದೇವರ ದರ್ಶನ ಪಡೆದುಕೊಂಡರು.

ಪೂರ್ವ ನಿಗದಿಯಂತೆ ಬೆಳಗ್ಗೆ, ಆಂಧ್ರಪ್ರದೇಶದ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದು ಅಲ್ಲಿಂದ ರಸ್ತೆ ಮಾರ್ಗವಾಗಿ ಹೊರಟು ಬೆಳಗಿನ 10.45ರ ವೇಳೆಗೆ ರಾಯಚೂರು ಗ್ರಾಮೀಣ ಪ್ರದೇಶದ ಪ್ರಸಿದ್ಧ ಅಧ್ಯಾತ್ಮ ಕೇಂದ್ರ ಪಂಚಮುಖಿ ಶ್ರೀ ಆಂಜನೇಯ ದರ್ಶನ ಪಡೆದುಕೊಂಡರು.

ದೇವಸ್ಥಾನದ ಪುರೋಹಿತರಾದ ಶ್ರೀ ಭಾರತಿ ಆಚಾರ್ಯ, ಶ್ರೀ ಶ್ಯಾಮಾಚಾರ್ಯ, ಶ್ರೀ ಅನಂತಾ ಚಾರ್ಯ ಮತ್ತು ಶ್ರೀ ಗುರುಭೀಮಾಚಾರ್ಯ ಅವರು ಪೂಜಾ ಕೈಂಕರ್ಯ ನಡೆಸಿಕೊಟ್ಟರು. ಡಿ.ಕೆ.ಶಿವಕುಮಾರ ಅವರ ಇಷ್ಟಾರ್ಥ ಸಿದ್ಧಿಗಾಗಿ ಪಂಚಮುಖಿ ಆಂಜನೇಯ ಉತ್ಸವ ಮೂರ್ತಿಗೆ ಇದೆ ವೇಳೆ ಪುಷ್ಪಾರ್ಚನೆ ನೆರವೇರಿತು.

ಈ ಸಂದರ್ಭದಲ್ಲಿ ಸಚಿವರಾದ ಎನ್ ಎಸ್ ಬೋಸರಾಜು, ಸಂಸದರಾದ ಜಿ ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಬಸವನಗೌಡ ತುರವಿಹಾಳ, ಮುಖಂಡರಾದ ಅಸ್ಲಂ ಪಾಶಾ ಸೇರಿದಂತೆ ಇನ್ನಿತರರು ಇದ್ದರು. ದೇವರ ದರ್ಶನ ಬಳಿಕ ಡಿ.ಕೆ.ಶಿವಕುಮಾರ ಅವರು ಪಕ್ಷದ ಕಾರ್ಯಕ್ರಮದಲ್ಲಿ ಭಾಗಿಯಾದರು.



ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಅಕ್ಟೋಬರ್ 22ರಂದು ನಾಡ ಪ್ರಸಿದ್ಧ ಅಧ್ಯಾತ್ಮ ಕೇಂದ್ರವಾದ ಮಂತ್ರಾಲಯಕ್ಕೆ ಭೇಟಿ ನೀಡಿ ಶ್ರೀ ರಾಘವೇಂದ್ರ ಸ್ವಾಮಿಗಳ ದಿವ್ಯದರ್ಶನ ಪಡೆದುಕೊಂಡರು. ಈ ಸಂದರ್ಭದಲ್ಲಿ ಸಚಿವರಾದ ಎನ್ ಎಸ್ ಬೋಸರಾಜು, ಸಂಸದರಾದ ಜಿ ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಆರ್ ಬಸನಗೌಡ ತುರವಿಹಾಳ, ಜಿ ಹಂಪಯ್ಯ ನಾಯಕ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಬಸನಗೌಡ ಬಾದರ್ಲಿ ಹಾಗೂ ಇನ್ನಿತರರು ಇದ್ದರು.

## ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಕೃಷಿ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು,ಅ.23–** ಇಲ್ಲಿನ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ 17ನೇ ಸಂಸ್ಥಾಪನಾ ದಿನಾಚರಣೆಯ ಅಂಗವಾಗಿ ವಿವಿಧ ಪ್ರಶಸ್ತಿಗಳ ಜೊತೆಗೆ ಕಲ್ಯಾಣ ಕರ್ನಾಟಕ ಭಾಗದ ಅತ್ಯುತ್ತಮ ಸಾಧನೆಗೈದ ಶ್ರೇಷ್ಠ ರೈತರಿಗೆ ಉತ್ತೇಜನೆ ನೀಡುವ ಸಲುವಾಗಿ 2025–26ನೇ ಸಾಲಿಗೆ ಕೃಷಿ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಈ ಪ್ರಶಸ್ತಿಗೆ ಸಂಬಂಧಿಸಿದ ಅರ್ಜಿ ನಮೂನೆ ಆಯ್ಕೆಯ ಸ್ಕೋರ್ ಕಾರ್ಡ್ಗಳನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್ ವಿಳಾಸ: https://uasraichur.kamataka.gov.in ಲಭ್ಯವಿದೆ.

ಹೆಚ್ಚಿನ ಮಾಹಿತಿಗಾಗಿ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರ, ರಾಯಚೂರು, ಬೀದರ್, ಕಲಬುರಗಿ, ರದ್ದೇವಾಡಗಿ, ಗಂಗಾವತಿ, ಕವಡಿಮಟ್ಟಿ, ಹಗರಿ ಮತ್ತು ಮುಖ್ಯಸ್ಥರು, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಭೀಮರಾಯನಗುಡಿ, ಲಿಂಗಸೂಗೂರು, ಕೊಪ್ಪಳ, ನಾಲವಾರ, ದೇವದುರ್ಗ ಹಾಗೂ ಹೂವಿನಹಡಗಲಿ ಇವರನ್ನು ಸಂಪರ್ಕಿಸಬಹುದಾಗಿದ್ದು, ಆಸಕ್ತ ರೈತರು ದಿನಾಂಕ 10–11–2025ರ ಸಂಜೆ 5ಗಂಟೆಯೊಳಗಾಗಿ ಸಂಬಂಧಿತ ಎಲ್ಲಾ ದಾಖಲೆಗಳೊಂದಿಗೆ ಅರ್ಜಿಯನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರು, ಲಿಂಗಸೂಗೂರು ರಸ್ತೆ, ರಾಯಚೂರು ಇವರ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: 9480696314/ 315/ 316/ 317/ 318/ 319/ 334/ 335/ 336ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂದುಕೊರತೆ ಸಹಾಯವಾಣಿ ಸ್ಥಾಪನೆ: ಸಿಇಒ ಈಶ್ವರ್ ಕುಮಾರ್

**ರಾಯಚೂರು,ಅ.23–**ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸರಬರಾಜು, ಸ್ವಚ್ಛತೆ ಮತ್ತು ನೈರ್ಮಲ್ಯ ಮೂಲಭೂತ ಸೌಕರ್ಯ ನಿರ್ವಹಣೆ ಹಾಗೂ ಗ್ರಾಮ ಪಂಚಾಯತಿಯ ಸೇವೆಗಳು ಹಾಗೂ ಜಿಲ್ಲಾ ಪಂಚಾಯತಿಯ ಅಧೀನಕ್ಕೆ ಒಳಪಡುವ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಕುಂದು ಕೊರತೆಗಳ ಬಗ್ಗೆ ದೂರವಾಣಿ ಮುಖಾಂತರ ಅಹವಾಲುಗಳನ್ನು ಸಲ್ಲಿಸುವುದಕ್ಕಾಗಿ ಜಿಲ್ಲಾ ಪಂಚಾಯತಿ ಕಾರ್ಯಾಲಯದಲ್ಲಿ ಸಾರ್ವಜನಿಕರ ಕುಂದು ಕೊರತೆ ಸಹಾಯವಾಣಿಯನ್ನು ಸ್ಥಾಪಿಸಲಾಗಿದ್ದು, ಸೇವೆಯ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ತಿಳಿಸಿದ್ದಾರೆ.

ಸಹಾಯವಾಣಿ ಸಂಖ್ಯೆ 08532–230539ಗೆ ಸಾರ್ವಜನಿಕರು ಬೆಳಿಗ್ಗೆ 10ಗಂಟೆಯಿಂದ ಸಂಜೆ 5:30ರವರೆಗೆ ದೂರವಾಣಿ ಮುಖಾಂತರ ಕರೆ ಮಾಡಬಹುದಾಗಿದೆ. ಹಾಗೂ ಇಮೇಲ್ ವಿಳಾಸ: zprcr.pgc@gmail.com ಮುಖಾಂತರ ಮನವಿಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂಜಾಟ:ದಿವ್ಯಾ ಹಾಗರಗಿ ಸೇರಿ 7 ಜನರ ಬಂಧನ




**ಕಲಬುರಗಿ,ಅ.23–**ನಗರದ ಹಳೇ ಜೇವರ್ಗಿ ರಸ್ತೆಯಲ್ಲಿರುವ ಪಿಎಸ್ಐ ಹಗರಣ ಪ್ರಕರಣದ ಪ್ರಮುಖ ಆರೋಪಿ ದಿವ್ಯಾ ಹಾಗರಗಿ ಮನೆ ಮೇಲೆ ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿ, ದಿವ್ಯಾ ಹಾಗರಗಿ ಸೇರಿದಂತೆ ಸೇರಿದಂತೆ ಏಳು ಮಂದಿಯನ್ನು ಬಂಧಿಸಿದ್ದಾರೆ.

ಪಿಎಸ್ಐ ಹಗರಣ ಪ್ರಕರಣದ ಪ್ರಮುಖ ಆರೋಪಿ ದಿವ್ಯಾ ಹಾಗರಗಿ, ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ರಾಜು ಲೆಂಗಟಿ, ಶಿವಶರಣಪ್ಪ ಮಶಾಳ, ರವೀಂದ್ರ ಮಾನಕರ, ಭಗವಾನ ಜಾಕೋರಿ, ಮಲ್ಲಿನಾಥ ಮಂಮಂಗಲಗಿ, ಸಂಗಮೇಶ ನಾಗನಹಳ್ಳಿ ಅವರನ್ನು ಬಂಧಿಸಲಾಗಿದೆ ಎಂದು ಸಿಸಿಬಿ ಪೊಲೀಸರು ತಿಳಿಸಿದ್ದಾರೆ.

ದಿವ್ಯಾ ಹಾಗರಗಿ ತನ್ನ ಮನೆಯಲ್ಲಿ ಗುಂಪು ಸೇರಿಸಿ ಜೂಜಾಟ ನಡೆಸುತ್ತಿರುವ ಕುರಿತಾಗಿ ಮಾಹಿತಿ ಪಡೆದ ಸಿಸಿಬಿ ಪೊಲೀಸರು, ಸರ್ಕಾರಿ ನೌಕರ ಸೇರಿದಂತೆ ಏಳು ಮಂದಿಯನ್ನು ಬಂಧಿಸಿದ್ದು, ಸ್ಥಳದಸ್ಥಳದಲ್ಲೇ 43 ಸಾವಿರ ರೂಪಾಯಿ ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಈ ಕುರಿತು ಕಲಬುರಗಿ ನಗರದ ಸ್ಟೇಷನ್ ಬಝಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H